ಸಂಪುಟ : 11 ಸಂಚಿಕೆ: 119 ಪುಟ : 4+2 ಬೆಲೆ: 3.00 ಶುಕ್ರವಾರ ಜೂನ್ 12 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 119 Pages : 4+2 Price : 3.00 Friday June 12 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಇಂದು ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಜನಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಜೂನ್ 12ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ದಿವಾಣಿ ನ್ಯಾಯಾಧೀಶರಾದ ಸಿ.ಎಸ್. ಶಿವನಗೌಡ್ರ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಜಯದೇವಿ ಅಂದಪ್ಪ ಕವಲೂರು, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಮೆಹಬೂಬ ತುಂಬರಮಟ್ಟಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಿಕ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಜಯಶ್ರೀ ಆರ್. ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್.ಜಿ. ಕಲ್ಲೂರ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಾಯಕ ಕಾನೂನು ಅಭಿರಕ್ಷಕರಾದ ಗುರುರಾಜ ಗೌರಿ ಅವರು "ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ" ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಕಾರ್ಮಿಕ ಇಲಾಖೆಯ ನಿರೀಕ್ಷಕರಾದ ಉಮೇಶ ಎಸ್. ಹುಲ್ಲಣ್ಣವರ, ಕುಮಾರಿ ಸುಷ್ಮಾ ಹಾಗೂ ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂದೇಶ ಚ. ಪಾಟೀಲ ಅವರು ಸಾರ್ವಜನಿಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕೋರಿದ್ದಾರೆ.

## ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮಲ್ಲಸಮುದ್ರದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ 2026-27ನೇ ಶೈಕ್ಷಣಿಕ ಸಾಲಿಗೆ ಸಮಾಜ ವಿಜ್ಞಾನ ವಿಷಯ ಬೋಧನೆಗಾಗಿ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸಮಾಜ ವಿಜ್ಞಾನ ವಿಷಯದಲ್ಲಿ ಅಗತ್ಯ ಶೈಕ್ಷಣಿಕ ಅರ್ಹತೆ ಹೊಂದಿರುವ ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ದಾಖಲಾತಿಗಳೊಂದಿಗೆ ಶಾಲೆಯ ಪ್ರಾಂಶುಪಾಲರನ್ನು ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನವಾಗಿದ್ದು, ಆಸಕ್ತ ಅಭ್ಯರ್ಥಿಗಳು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಮಲ್ಲಸಮುದ್ರದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### ಮೃತರ ಹೆಸರಿನಲ್ಲಿ ಹಣ ಜಮೆ ತಡೆಯಲು ಅಧಿಕಾರಿಗಳಿಗೆ ಅಸೂಟಿ ಖಡಕ್ ಸೂಚನೆ

# ಗೃಹಲಕ್ಷ್ಮಿ ಹಣದ ಸೋರಿಕೆಗೆ ಬೀಗ!

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮಿ ಯೋಜನೆಯ ಸೌಲಭ್ಯ ವಿತರಣೆಯಲ್ಲಿ ಯಾವುದೇ ರೀತಿಯ ವಿಳಂಬಕ್ಕೆ ಅವಕಾಶ ನೀಡಬಾರದು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಗುರುವಾರ ನಡೆದ ಗೃಹಲಕ್ಷ್ಮಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮಹಿಳೆಯರ ಆರ್ಥಿಕ ಸಬಲೀಕರಣದ ಉದ್ದೇಶದಿಂದ ಜಾರಿಗೊಂಡಿರುವ ಯೋಜನೆಯ ಪ್ರಯೋಜನ ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ತಲುಪಬೇಕು ಎಂದು ಹೇಳಿದರು.

ಯೋಜನೆಯ ಹಣ ದುರುಪಯೋಗವಾಗದಂತೆ ನಿಗಾ ವಹಿಸಬೇಕು. ವಿಶೇಷವಾಗಿ ಮೃತಪಟ್ಟ ಫಲಾನುಭವಿಗಳ ಖಾತೆಗಳಿಗೆ ಹಣ ಜಮೆಯಾಗದಂತೆ ಕ್ರಮ ಕೈಗೊಳ್ಳಬೇಕು. ಈಗಾಗಲೇ ಅಂತಹ ಪ್ರಕರಣಗಳು ಕಂಡುಬಂದಿದ್ದರೆ ಸರ್ಕಾರಕ್ಕೆ ಹಣ ಮರುಪಾವತಿಸುವ ಪ್ರಕ್ರಿಯೆ ಆರಂಭಿಸಬೇಕು ಎಂದು ನಿರ್ದೇಶನ ನೀಡಿದರು.

ಅಂಗನವಾಡಿ ಕಾರ್ಯಕರ್ತೆಯರು ಮನೆಮನೆಗೆ ಭೇಟಿ ನೀಡಿ ಫಲಾನುಭವಿಗಳ ಹಾಗೂ ಮೃತಪಟ್ಟವರ ಮಾಹಿತಿಯನ್ನು ಸಂಗ್ರಹಿಸಬೇಕು. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಈ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ಬ್ಯಾಂಕ್‌ಗಳಿಗೆ ಸಲ್ಲಿಸುವಂತೆ ಸೂಚಿಸಿದರು.

ಸಭೆಯಲ್ಲಿ ಮಾತನಾಡಿದ ಜಿಲ್ಲಾ ಗ್ಯಾರಂಟಿ ಯೋಜನೆ ಪ್ರಾಧಿಕಾರದ ಸದಸ್ಯ ಅಶೋಕ ಮಂದಾಲಿ, ಆಧಾರ್ ಸೀಡಿಂಗ್ ಹಾಗೂ ಇತರ ತಾಂತ್ರಿಕ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಬೇಕು. ಮನೆಮನೆ ಸಮೀಕ್ಷೆಯಲ್ಲಿ ವಿಳಂಬವಾಗಬಾರದು. ಅಗತ್ಯವಿದ್ದರೆ ಹೆಚ್ಚುವರಿ ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಕೂಡಲೇ ಪ್ರಸ್ತಾವನೆ ಸಲ್ಲಿಸಬೇಕು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರ ಪ್ರಾಸ್ತಾವಿಕವಾಗಿ ಮಾತನಾಡಿ, ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿಸುವ ಉದ್ದೇಶದಿಂದ ಜಾರಿಗೊಂಡಿರುವ ಯೋಜನೆಯ ಅನುಷ್ಠಾನದಲ್ಲಿ ಎದುರಾಗುತ್ತಿರುವ ತಾಂತ್ರಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸಭೆ ಆಯೋಜಿಸಲಾಗಿದೆ ಎಂದು ತಿಳಿಸಿದರು.

> "ಗೃಹಲಕ್ಷ್ಮಿ ಯೋಜನೆಯ ಸೌಲಭ್ಯದಿಂದ ಯಾವುದೇ ಅರ್ಹ ಮಹಿಳೆ ವಂಚಿತರಾಗಬಾರದು. ಯೋಜನೆಯ ಹಣ ದುರುಪಯೋಗ ಹಾಗೂ ಮೃತರ ಖಾತೆಗೆ ಜಮೆಯಾಗುವುದನ್ನು ತಡೆಯಲು ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು."
> – **ಬಿ.ಬಿ. ಅಸೂಟಿ,** ಅಧ್ಯಕ್ಷರು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ

#### ಜಿಲ್ಲೆಯಲ್ಲಿ 2.61 ಲಕ್ಷ ಅರ್ಜಿಗಳ ನೋಂದಣಿ

ಗೃಹಲಕ್ಷ್ಮಿ ಯೋಜನೆಯಡಿ ಗದಗ ಜಿಲ್ಲೆಯಲ್ಲಿ ಫೆಬ್ರುವರಿ 2026ರವರೆಗೆ 2,61,860 ಅರ್ಜಿಗಳು ನೋಂದಣಿಯಾಗಿದ್ದು, 2,52,843 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಜಿಲ್ಲೆ ಒಟ್ಟಾರೆ ಶೇ.96.56ರಷ್ಟು ಸಾಧನೆ ದಾಖಲಿಸಿದೆ.

ತಾಲೂಕುವಾರು ಸಾಧನೆಯಲ್ಲಿ ಶಿರಹಟ್ಟಿ (96.97%) ಮೊದಲ ಸ್ಥಾನದಲ್ಲಿದ್ದು, ಲಕ್ಷ್ಮೇಶ್ವರ (96.83%), ನರಗುಂದ (96.62%), ಮುಂಡರಗಿ (96.52%), ರೋಣ (96.53%), ಗದಗ (96.50%) ಹಾಗೂ ಗಜೇಂದ್ರಗಡ (96.14%) ಕ್ರಮವಾಗಿ ಸ್ಥಾನ ಪಡೆದಿವೆ.

ಸಭೆಯಲ್ಲಿ ಇ-ಕೆವೈಸಿ, ಎನ್‌ಪಿಸಿಐ ಹಾಗೂ ಇತರೆ ತಾಂತ್ರಿಕ ಸಮಸ್ಯೆಗಳ ಕುರಿತು ಸುದೀರ್ಘ ಚರ್ಚೆ ನಡೆಯಿತು. ಜಿಲ್ಲಾ ಗ್ಯಾರಂಟಿ ಯೋಜನೆ ಪ್ರಾಧಿಕಾರದ ಪದಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಅಂಗನವಾಡಿ ಮೇಲ್ವಿಚಾರಕರು ಉಪಸ್ಥಿತರಿದ್ದರು.

### ಎಚ್ಕೆಪಿಗೆ ಎರಡನೇ ಹಂತದಲ್ಲಾದರೂ ಸಂಪುಟಕ್ಕೆ ಸೇರಿಸಿ'– ಕಾಂಗ್ರೆಸ್ ಹೈಕಮಾಂಡಗೆ ಒತ್ತಾಯ

# ಎಪಿಎಂಸಿ ಹಮಾಲರ ವಿಶಿಷ್ಟ ಹೋರಾಟ

■ವಿಜಯಸಾಕ್ಷಿ ಸುದ್ದಿ, ಗದಗ



ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಗದಗ ಶಾಸಕ ಎಚ್.ಕೆ.ಪಾಟೀಲ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡುವಂತೆ ಆಗ್ರಹಿಸಿ ಗದಗ ಎಪಿಎಂಸಿ ಹಮಾಲರು, ಚಕ್ಕಡಿ ಸಂಘ ಹಾಗೂ ತಳಗಾಳು ಸಂಘದ ಸದಸ್ಯರು ಗುರುವಾರ ನಗರದಲ್ಲಿ ವಿಶಿಷ್ಟ ಪ್ರತಿಭಟನೆ ನಡೆಸಿದರು.

ಎಪಿಎಂಸಿ ಆವರಣದಿಂದ ವೀರೇಶ್ವರ ಪುಣ್ಯಾಶ್ರಮದವರೆಗೆ ಶ್ರಮಿಕರು ದೀಡ್ ನಮಸ್ಕಾರ ಹಾಕುತ್ತಾ ಸಾಗುವ ಮೂಲಕ ತಮ್ಮ ಒತ್ತಾಯವನ್ನು ಸರ್ಕಾರದ ಗಮನಕ್ಕೆ ತಂದರು. ಜೊತೆಗೆ ಹಲಗೆ ಬಾರಿಸಿ ಘೋಷಣೆಗಳನ್ನು ಕೂಗುತ್ತ ಶಕ್ತಿ ಪ್ರದರ್ಶನ ನಡೆಸಿದರು.

ಮೆರವಣಿಗೆಗೆ ಮುನ್ನ ಎಪಿಎಂಸಿ ಹಮಾಲರ ವಿಶ್ರಾಂತಿ ಗೃಹದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಚಾಲನೆ ನೀಡಲಾಯಿತು.

ಪ್ರತಿಭಟನಾಕಾರರು, "ಬಡವರು, ಹಿಂದುಳಿದವರು, ಹಮಾಲರು ಹಾಗೂ ಶ್ರಮಿಕರ ಪರವಾಗಿ ನಿರಂತರವಾಗಿ ಧ್ವನಿ ಎತ್ತಿರುವ ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು" ಎಂಬ ಬರಹವಿರುವ ಫಲಕಗಳನ್ನು ಪ್ರದರ್ಶಿಸಿ ಗಮನ ಸೆಳೆದರು.

ಕರ್ನಾಟಕ ರಾಜ್ಯ ಹಮಾಲರ ಒಕ್ಕೂಟದ ರಾಜ್ಯಾಧ್ಯಕ್ಷ ಅಯ್ಯಪ್ಪ ನಾಯ್ಕರ್, ಎಪಿಎಂಸಿ ಹಮಾಲರು ಹಾಗೂ ಚಕ್ಕಡಿ ಸಂಘದ ಅಧ್ಯಕ್ಷ ಆದಪ್ಪ ಮಾರೆಪ್ಪನವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಮುಖಂಡರು, ಜಿಲ್ಲೆಯ ಅಭಿವೃದ್ಧಿಗೆ ಎಚ್.ಕೆ. ಪಾಟೀಲ ಅವರ ಕೊಡುಗೆ ಮಹತ್ವದ್ದಾಗಿದೆ. ಮೊದಲ ಹಂತದಲ್ಲಿ ಅವಕಾಶ ತಪ್ಪಿದ್ದರೆ, ಎರಡನೇ ಹಂತದಲ್ಲಾದರೂ ಸಂಪುಟ ದರ್ಜೆ ಸಚಿವ ಸ್ಥಾನ ನೀಡಿ ಗೌರವಿಸಬೇಕು ಎಂದು ಒತ್ತಾಯಿಸಿದರು.

ಕಮಲವ್ವ ಚಲವಾದಿ, ಕನಕವ್ವ ದಾಸರ, ಯಲ್ಲವ್ವ ಚಲವಾದಿ, ರಾಮಚಂದ್ರ ಹರಿಜನ, ಹನಮವ್ವ ತುಮ್ಮರಮಟ್ಟಿ, ಸುಮಾ ಆದೋನಿ, ಶೇಖವ್ವ ಸಂಕಣ್ಣವರ, ಸರೋಜವ್ವ ಚಲವಾದಿ ಸೇರಿದಂತೆ ಹಲವರು ದೀಡ್ ನಮಸ್ಕಾರ ಹಾಕಿ ಬೆಂಬಲ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ 200ಕ್ಕೂ ಹೆಚ್ಚು ಹಮಾಲರು, ಶ್ರಮಿಕರು ಹಾಗೂ ವಿವಿಧ ಸಂಘಟನೆಗಳ ಸದಸ್ಯರು ಪಾಲ್ಗೊಂಡಿದ್ದರು.

### ಬಡ-ಮಧ್ಯಮ ವರ್ಗದ ಕುಟುಂಬಗಳಿಗೆ ನೆರವಿನ ಹಸ್ತ; ಬೆಟಗೇರಿ ಈದ್ಗಾ ಕಮಿಟಿಯಿಂದ ನೋಂದಣಿಗೆ ಆಹ್ವಾನ

## ಆ. 30ರಂದು ಸಾಮೂಹಿಕ ವಿವಾಹ ಮಹೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ನೆರವಾಗುವ ಉದ್ದೇಶದಿಂದ ಬೆಟಗೇರಿ ಈದ್ಗಾ ಕಮಿಟಿ ವತಿಯಿಂದ ಆಗಸ್ಟ್ 30ರಂದು ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕಮಿಟಿ ಮುಖಂಡ ಪೀರಸಾಬ್ ಕೌತಾಳ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗದಗ ಜಿಲ್ಲೆಯ ಮುಸ್ಲಿಂ ಸಮುದಾಯದ ಯುವಕ-ಯುವತಿಯರು ಈ ಸೌಲಭ್ಯದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

> "ಸಾಮೂಹಿಕ ವಿವಾಹವು ಕೇವಲ ವಿವಾಹ ಕಾರ್ಯಕ್ರಮವಲ್ಲ, ಸಮಾಜದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಆರ್ಥಿಕ ಹೊರೆ ಕಡಿಮೆ ಮಾಡುವ ಸಾಮಾಜಿಕ ಸೇವೆಯಾಗಿದೆ."
> – **ಪೀರಸಾಬ್ ಕೌತಾಳ,** ಮುಖಂಡರು, ಬೆಟಗೇರಿ ಈದ್ಗಾ ಕಮಿಟಿ

ಆಗಸ್ಟ್ 26ರಂದು ಹಜರತ್ ಮಹಮ್ಮದ್ ಪೈಗಂಬರ್ ಜಯಂತಿ ಆಚರಣೆ ನಡೆಯಲಿದ್ದು, ಅದರ ಅಂಗವಾಗಿ ಆಗಸ್ಟ್ 30ರಂದು ಸಾಮೂಹಿಕ ವಿವಾಹ ಮಹೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಈ ಹಿಂದೆ ಈದ್ಗಾ ಕಮಿಟಿ ಆಯೋಜಿಸಿದ್ದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ 42 ಜೋಡಿಗಳು ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದು, ಈ ಬಾರಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಜೋಡಿಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದು ಹೇಳಿದರು.

ಆಸಕ್ತರು ಆಗಸ್ಟ್ 20ರೊಳಗೆ ತಮ್ಮ ಹೆಸರು ನೋಂದಾಯಿಸಿಕೊಳ್ಳಬೇಕು. ವಿವಾಹವಾಗುವ ವಧು-ವರರು ತಮ್ಮ ತಮ್ಮ ಗ್ರಾಮಗಳ ಜಮಾತ್‌ನಿಂದ ಒಪ್ಪಿಗೆ ಪತ್ರವನ್ನು ಪಡೆದು ಸಲ್ಲಿಸಬೇಕು ಎಂದು ತಿಳಿಸಿದರು.

▸▸ 3ನೇ ಪುಟಕ್ಕೆ

### ಅಂತರ್ ಜಿಲ್ಲಾ ಕಳ್ಳರ ಗ್ಯಾಂಗ್ ಸೆರೆ; 13 ಪ್ರಕರಣಗಳ ಭೇದಸಿ, 15 ಲಕ್ಷ ರೂ. ಮೌಲ್ಯದ ಚಿನ್ನ-ಬೆಳ್ಳಿ ವಶಕ್ಕೆ ಪಡೆದ ಪೊಲೀಸರು

# ಸರಣಿ ಮನೆಗಳ್ಳತನಕ್ಕೆ ಗದಗ ಪೊಲೀಸರ ಬ್ರೇಕ್

■ವಿಜಯಸಾಕ್ಷಿ ಸುದ್ದಿ, ಗದಗ




ಕಳೆದ 20 ದಿನಗಳಿಂದ ಗದಗ ಜಿಲ್ಲೆಯ ವಿವಿಧ ಭಾಗಗಳಲ್ಲಿ ಮನೆಗಳ್ಳತನ ನಡೆಸಿ ಸಾರ್ವಜನಿಕರಲ್ಲಿ ಭೀತಿ ಮೂಡಿಸಿದ್ದ ಅಂತರ್ ಜಿಲ್ಲಾ ಕಳ್ಳರ ತಂಡವನ್ನು ಬಂಧಿಸುವಲ್ಲಿ ಜಿಲ್ಲಾ ಪೊಲೀಸರು ಯಶಸ್ವಿಯಾಗಿದ್ದಾರೆ. ಕಾರ್ಯಾಚರಣೆಯಲ್ಲಿ ಮೂವರು ಆರೋಪಿಗಳನ್ನು ಬಂಧಿಸಲಾಗಿದ್ದು, ಅವರಿಂದ ಸುಮಾರು 15 ಲಕ್ಷ ರೂ. ಮೌಲ್ಯದ ಚಿನ್ನಾಭರಣ, ಬೆಳ್ಳಿ ಆಭರಣಗಳು ಹಾಗೂ ನಗದು ವಶಪಡಿಸಿಕೊಳ್ಳಲಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಗುರುವಾರ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಈ ಮಾಹಿತಿ ನೀಡಿದರು.

ಮೇ 11ರಿಂದ ಜೂನ್ 3ರವರೆಗೆ ಮುಂಡರಗಿ, ನರೇಗಲ್ಲ, ರೋಣ ಹಾಗೂ ಶಿರಹಟ್ಟಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಒಟ್ಟು 8 ಮನೆಗಳ್ಳತನ ಪ್ರಕರಣಗಳು ದಾಖಲಾಗಿದ್ದವು. ಒಂದೇ ಮಾದರಿಯಲ್ಲಿ ಕಳ್ಳತನಗಳು ನಡೆಯುತ್ತಿದ್ದ ಹಿನ್ನೆಲೆ ಆರೋಪಿಗಳ ಪತ್ತೆಗಾಗಿ ವಿಶೇಷ ತಂಡಗಳನ್ನು ರಚಿಸಿ ತನಿಖೆ ನಡೆಸಲಾಗಿತ್ತು.

ಜೂನ್ 7ರಂದು ಮುಂಡರಗಿ ಪಟ್ಟಣದ ಬ್ಯಾಲವಾಡಗಿ ಕ್ರಾಸ್ ಬಳಿ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಮೂವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಸರಣಿ ಕಳ್ಳತನ ಪ್ರಕರಣಗಳು ಬೆಳಕಿಗೆ ಬಂದಿವೆ.

ಲಕ್ಷ್ಮೇಶ್ವರದ ಹನುಮಂತ ಕುಂಚಿಕೊರವರ, ಶಿಗ್ಗಾಂವಿಯ ಮಹಾಂತೇಶ ಕುಂಚಿಕೊರವರ ಹಾಗೂ ದುರುಗೇಶ ಗುತ್ತಲ್ ಬಂಧಿತ ಆರೋಪಿಗಳಾಗಿದ್ದಾರೆ.

ವಿಚಾರಣೆ ವೇಳೆ ಆರೋಪಿಗಳು ಗದಗ ಜಿಲ್ಲೆಯಷ್ಟೇ ಅಲ್ಲದೆ ಧಾರವಾಡ, ದಾವಣಗೆರೆ ಹಾಗೂ ಮೈಸೂರು ಜಿಲ್ಲೆಗಳಲ್ಲಿಯೂ ಮನೆಗಳ್ಳತನ ನಡೆಸಿರುವುದನ್ನು ಒಪ್ಪಿಕೊಂಡಿದ್ದಾರೆ. ಒಟ್ಟು 13 ಮನೆಗಳ್ಳತನ ಪ್ರಕರಣಗಳಲ್ಲಿ ಇವರ ಕೈವಾಡ ಇರುವುದು ತನಿಖೆಯಿಂದ ದೃಢಪಟ್ಟಿದೆ.

ನರಗುಂದ ಉಪ ವಿಭಾಗದ ಡಿವೈಎಸ್ಪಿ ಪ್ರಭುಗೌಡ ಡಿ.ಕೆ. ಅವರ ಮಾರ್ಗದರ್ಶನದಲ್ಲಿ ಇನ್ಸ್‌ಪೆಕ್ಟರ್‌ಗಳಾದ ಅಮ್ಮಣಗೌಡ ಪಾಟೀಲ, ಬಿ.ಎನ್. ಯಳವತ್ತಿ ಹಾಗೂ ಪ್ರಕಾಶ ಬಣಕಾರ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿತು.

> "ಸರಣಿ ಮನೆಗಳ್ಳತನ ಪ್ರಕರಣಗಳಿಂದ ಸಾರ್ವಜನಿಕರಲ್ಲಿ ಉಂಟಾಗಿದ್ದ ಆತಂಕ ನಿವಾರಿಸಲು ವಿಶೇಷ ತಂಡಗಳನ್ನು ರಚಿಸಲಾಗಿತ್ತು. ನಿಖರ ಕಾರ್ಯಾಚರಣೆಯಿಂದ 13 ಪ್ರಕರಣಗಳನ್ನು ಭೇದಿಸಿ ಆರೋಪಿಗಳನ್ನು ಬಂಧಿಸಲಾಗಿದೆ."
> – **ರೋಹನ್ ಜಗದೀಶ್,** ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

#### 15 ಲಕ್ಷ ರೂ. ಮೌಲ್ಯದ ಕಳ್ಳಸೊತ್ತು ವಶ

ಆರೋಪಿಗಳಿಂದ 145 ಗ್ರಾಂ ಬಂಗಾರದ ಆಭರಣ, 332 ಗ್ರಾಂ ಬೆಳ್ಳಿ ಆಭರಣ ಹಾಗೂ ₹50 ಸಾವಿರ ನಗದು ಸೇರಿ ಒಟ್ಟು ಸುಮಾರು ₹15 ಲಕ್ಷ ಮೌಲ್ಯದ ಸೊತ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

▸▸ 3ನೇ ಪುಟಕ್ಕೆ

5 ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯ ಲಸಿಕೆ; ಮನೆ ಮನೆಗೆ ತೆರಳಿ ಆರೋಗ್ಯ ಸಿಬ್ಬಂದಿಯಿಂದ ಹನಿ ವಿತರಣೆ

## ಜೂ. 28ರಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದ 0ರಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ವಿರುದ್ಧ ರಕ್ಷಣೆ ನೀಡುವ ಉದ್ದೇಶದಿಂದ ಜೂನ್ 28ರಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಿತ್ವಿಕ್ ಪಾಂಡೆ ತಿಳಿಸಿದ್ದಾರೆ.

ಭಾರತವು 14 ವರ್ಷಗಳಿಗಿಂತಲೂ ಹೆಚ್ಚು ಕಾಲ ಪೋಲಿಯೋ ಮುಕ್ತ ರಾಷ್ಟ್ರವಾಗಿದ್ದರೂ, ಕೆಲವು ದೇಶಗಳಲ್ಲಿ ಹಾಗೂ ಭಾರತದ ನೆರೆಯ ರಾಷ್ಟ್ರಗಳಲ್ಲಿ ವೈಲ್ಡ್ ಪೋಲಿಯೋ ವೈರಸ್ ಹರಡುವಿಕೆ ಇನ್ನೂ ಕಂಡುಬರುತ್ತಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಈ ಅಭಿಯಾನ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಮೊದಲ ದಿನ ಜೂನ್ 28ರಂದು ರಾಜ್ಯದಾದ್ಯಂತ ಸ್ಥಾಪಿಸಲಿರುವ ಪೋಲಿಯೋ ಬೂತ್‌ಗಳಲ್ಲಿ ಮಕ್ಕಳಿಗೆ ಹನಿಗಳನ್ನು ನೀಡಲಾಗುತ್ತದೆ. ನಂತರದ ಎರಡು-ಮೂರು ದಿನಗಳ ಕಾಲ ಆರೋಗ್ಯ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿ ಲಸಿಕೆ ಪಡೆಯದೇ ಉಳಿದ ಮಕ್ಕಳಿಗೆ ಹನಿಗಳನ್ನು ಹಾಕಲಿದ್ದಾರೆ.

ವಲಸಿಗ ಸಮುದಾಯದ ಮಕ್ಕಳು, ಅಪಾಯದಂಚಿನ ಪ್ರದೇಶಗಳು ಹಾಗೂ ನಗರ ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುವ ಮಕ್ಕಳಿಗೆ ವಿಶೇಷ ಆದ್ಯತೆ ನೀಡಲಾಗುತ್ತದೆ.

**ವ್ಯಾಪಕ ಜಾಗೃತಿ ಅಭಿಯಾನ :** ಕಾರ್ಯಕ್ರಮ ಯಶಸ್ವಿಗೊಳಿಸಲು ಎಲ್ಲಾ ಇಲಾಖೆಗಳ ಸಹಕಾರ ಕೋರಿರುವ ಆರೋಗ್ಯ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ವ್ಯಾಪಕ ಪ್ರಚಾರ ಕೈಗೊಳ್ಳುವಂತೆ ಸೂಚಿಸಿದೆ. ಮಾಧ್ಯಮಗಳು, ಆಕಾಶವಾಣಿ ಹಾಗೂ ಎಫ್.ಎಂ. ವಾಹಿನಿಗಳ ಮೂಲಕ ಜಿಂಗಲ್ಸ್ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಪ್ರಸಾರ ಮಾಡುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ತಪ್ಪದೇ ಪೋಲಿಯೋ ಹನಿಗಳನ್ನು ಹಾಕಿಸುವ ಮೂಲಕ ಪೋಷಕರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಆರೋಗ್ಯ ಇಲಾಖೆ ಮನವಿ ಮಾಡಿದೆ.

ಡಂಬಳದಲ್ಲಿ ರೈತ ಹನಮಂತಪ್ಪ ಆಲೂರ ಕುಟುಂಬ ಸಂಕಷ್ಟಕ್ಕೆ; ಮೂರು ಟ್ರ್ಯಾಕ್ಟರ್ ಸಿಂಗಾ ಹೊಟ್ಟು ಹಾಳು

# ಮಳೆರಾಯನ ಅಬ್ಬರಕ್ಕೆ ಮನೆ ಗೋಡೆ ಕುಸಿತ

■ವಿಜಯಸಾಕ್ಷಿ ಸುದ್ದಿ, ಡಂಬಳ

ಕಳೆದ ನಾಲ್ಕು ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಯ ಅಬ್ಬರಕ್ಕೆ ಡಂಬಳ ಗ್ರಾಮದ ರೈತ ಹನಮಂತಪ್ಪ ಶಿವಪ್ಪ ಆಲೂರ ಅವರಿಗೆ ಸೇರಿದ ಮಣ್ಣಿನ ಮನೆಯ ಗೋಡೆ ಕುಸಿದು ಅಪಾರ ಪ್ರಮಾಣದ ಹಾನಿ ಸಂಭವಿಸಿದೆ. ಮನೆ ಭಾಗಶಃ ನೆಲಸಮವಾಗಿದ್ದು, ಕುಟುಂಬ ಸಂಕಷ್ಟಕ್ಕೆ ಸಿಲುಕಿದೆ.

ಮಂಗಳವಾರ ರಾತ್ರಿ ಸುರಿದ ಭಾರೀ ಮಳೆಯಿಂದ ಮನೆಯ ಗೋಡೆಗಳು ಏಕಾಏಕಿ ಕುಸಿದು ಬಿದ್ದಿವೆ. ಮನೆಯ ಒಂದು ಭಾಗ ಸಂಪೂರ್ಣ ನೆಲಸಮವಾಗಿದ್ದರೆ, ಮತ್ತೊಂದು ಗೋಡೆ ಶೇ.65ರಷ್ಟು ಕುಸಿದು ಬೀಳುವ ಸ್ಥಿತಿಯಲ್ಲಿದೆ. ಗೋಡೆ ಕುಸಿದ ಪರಿಣಾಮ ಮನೆಯ ಪಕ್ಕದಲ್ಲಿದ್ದ ಮೂರು ಟ್ರ್ಯಾಕ್ಟರ್‌ಗಳಷ್ಟು ಸಿಂಗಾ ಹೊಟ್ಟು ಸಂಪೂರ್ಣ ಹಾಳಾಗಿದ್ದು, ರೈತ ಕುಟುಂಬಕ್ಕೆ ಭಾರೀ ನಷ್ಟ ಉಂಟಾಗಿದೆ.

ಘಟನೆ ನಡೆದ ವೇಳೆ ಮನೆಯಲ್ಲಿದ್ದ ಕುಟುಂಬದ ಸದಸ್ಯರು ಸಮಯಕ್ಕೆ ಸರಿಯಾಗಿ ಹೊರಬಂದಿದ್ದರಿಂದ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಆದರೆ ವಾಸಿಸಲು ಸುರಕ್ಷಿತ ಆಶ್ರಯವಿಲ್ಲದೆ ಕುಟುಂಬ ಆತಂಕದ ದಿನಗಳನ್ನು ಎದುರಿಸುತ್ತಿದೆ. ಮನೆ ಕುಸಿದಿದ್ದರೂ ಅದೇ ಅವಶೇಷಗಳ ನಡುವೆ ಅಡುಗೆ ಮಾಡುತ್ತಿರುವ ಕುಟುಂಬದ ದೃಶ್ಯ ಮನಕಲಕುವಂತಿತ್ತು.



ಕುಟುಂಬದ ಸದಸ್ಯೆ ಪ್ರೇಮವ್ವ ಹನಮಂತಪ್ಪ ಆಲೂರ ಮಾತನಾಡಿ, "ಸಾಲ ಮಾಡಿ ಕೃಷಿ ಮಾಡಿದ್ದೇವೆ. ಬೆಳೆದ ಬೆಳೆಗಳಿಗೆ ಸರಿಯಾದ ಬೆಲೆ ಸಿಗುತ್ತಿಲ್ಲ. ಮನೆ ಕಟ್ಟಲು ಸಹ ಸಾಲ ಮಾಡಿದ್ದೇವೆ. ಈಗ ಮಳೆಗೆ ಮನೆ ಕುಸಿದಿದೆ. ನಾವು ಎಲ್ಲಿಗೆ ಹೋಗಬೇಕು ಎಂಬುದೇ ಗೊತ್ತಾಗುತ್ತಿಲ್ಲ. ಸರ್ಕಾರ ನಮಗೆ ಆಶ್ರಯ ಮನೆ ಕಲ್ಪಿಸಬೇಕು" ಎಂದು ಕಣ್ಣೀರಿಟ್ಟರು.

ಮಾಹಿತಿ ತಿಳಿಯುತ್ತಿದ್ದಂತೆಯೇ ಉಪ ತಹಸೀಲ್ದಾರ್ ಎಸ್.ಎಸ್. ಬಿಚಾಲಿ, ಕಂದಾಯ ಅಧಿಕಾರಿ ಪ್ರಭು ಬಾಗಲಿ ಹಾಗೂ ಕಂದಾಯ ಆಡಳಿತಾಧಿಕಾರಿ ಲಕ್ಷ್ಮಣ ಗುಡಸಲಮನಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಹಾನಿಯ ಪ್ರಮಾಣದ ಕುರಿತು ಮಾಹಿತಿ ಸಂಗ್ರಹಿಸಿ ವರದಿ ಸಿದ್ಧಪಡಿಸಲಾಗಿದ್ದು, ಸರ್ಕಾರದ ನಿಯಮಾನುಸಾರ ಸೂಕ್ತ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದರು.

> "ಸಾಲ ಮಾಡಿ ಬದುಕು ಕಟ್ಟಿಕೊಂಡಿದ್ದೇವೆ. ಈಗ ಮನೆ ಕುಸಿದಿದೆ. ನಮಗೆ ಆಶ್ರಯ ಮನೆ ಕಲ್ಪಿಸಿ."
> – **ಪ್ರೇಮವ್ವ ಹನಮಂತಪ್ಪ ಆಲೂರ**

ಸತತ ಮಳೆಯಿಂದ ಗ್ರಾಮದಲ್ಲಿ ಹಲವಾರು ಹಳೆಯ ಮಣ್ಣಿನ ಮನೆಗಳು ಅಪಾಯದ ಸ್ಥಿತಿಯಲ್ಲಿದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸಬೇಕು ಎಂದು ಉಪತಹಶೀಲ್ದಾರ ಎಸ್.ಎಸ್. ಬಿಚಾಲಿ ಮನವಿ ಮಾಡಿದ್ದಾರೆ.

ಜನಪರ ಯೋಜನೆಗಳು, ದಿಟ್ಟ ನಿರ್ಧಾರಗಳಿಂದ ದೇಶದ ಕೀರ್ತಿ ಹೆಚ್ಚಳ: ವಿಜಯಕುಮಾರ ಗಡ್ಡಿ

# ಮೋದಿ ಆಡಳಿತದ ಸುವರ್ಣ ಅಧ್ಯಾಯ



> "ಪ್ರಧಾನಿ ನರೇಂದ್ರ ಮೋದಿ ಅವರ 12 ವರ್ಷಗಳ ಆಡಳಿತ ಭಾರತವನ್ನು ವಿಶ್ವದ ಗಮನ ಸೆಳೆಯುವ ರಾಷ್ಟ್ರವನ್ನಾಗಿ ರೂಪಿಸಿದೆ. ಅಭಿವೃದ್ಧಿ, ಭದ್ರತೆ ಮತ್ತು ಜನಕಲ್ಯಾಣದ ಮೂಲಕ ನವಭಾರತದ ಕನಸನ್ನು ನನಸು ಮಾಡುವ ದಿಕ್ಕಿನಲ್ಲಿ ದೇಶವನ್ನು ಮುನ್ನಡೆಸುತ್ತಿರುವ ಅವರು ನಿಜಕ್ಕೂ ನವಭಾರತದ ಭಾಗ್ಯವಿಧಾತರು."
> – **ವಿಜಯಕುಮಾರ ಗಡ್ಡಿ,** ಬಿಜೆಪಿ ಮುಖಂಡ ಹಾಗೂ ಉದ್ಯಮಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತಕ್ಕೆ 12 ವರ್ಷಗಳು ಪೂರ್ಣಗೊಂಡಿರುವ ಸಂದರ್ಭದಲ್ಲಿ ಭಾರತವು ಜಾಗತಿಕ ಮಟ್ಟದಲ್ಲಿ ಹೊಸ ಗುರುತು ಮೂಡಿಸಿಕೊಂಡಿದ್ದು, ದೇಶದ ಅಭಿವೃದ್ಧಿ, ಭದ್ರತೆ ಹಾಗೂ ಜನಕಲ್ಯಾಣದ ಕ್ಷೇತ್ರಗಳಲ್ಲಿ ಐತಿಹಾಸಿಕ ಸಾಧನೆಗಳನ್ನು ದಾಖಲಿಸಿದೆ ಎಂದು ಬಿಜೆಪಿ ಮುಖಂಡ ಹಾಗೂ ಉದ್ಯಮಿ ವಿಜಯಕುಮಾರ ಗಡ್ಡಿ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪ್ರಧಾನಿ ಮೋದಿ ಅವರ ನಾಯಕತ್ವದಲ್ಲಿ ಭಾರತವು ವಿಶ್ವದ ಪ್ರಬಲ ರಾಷ್ಟ್ರಗಳ ಸಾಲಿನಲ್ಲಿ ಸ್ಥಾನ ಪಡೆದುಕೊಂಡಿದ್ದು, ನವಭಾರತದ ನಿರ್ಮಾಣಕ್ಕೆ ಭದ್ರ ಬುನಾದಿ ಹಾಕಲಾಗಿದೆ ಎಂದು ಅಭಿಪ್ರಾಯಪಟ್ಟರು.

ಪ್ರಧಾನಿ ಮೋದಿ ಅವರು ರಾಜಕಾರಣವನ್ನು ಅಧಿಕಾರದ ಸಾಧನವಾಗಿ ಬಳಸದೇ, ಸೇವೆಯ ತಪಸ್ಸಾಗಿ ಆಚರಿಸುತ್ತಿದ್ದಾರೆ. ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ ಜನಸೇವೆಗೆ ಆದ್ಯತೆ ನೀಡುತ್ತಾ, ಯುವಜನರಿಗೆ ಮಾದರಿಯಾಗಿ ಹೊರಹೊಮ್ಮಿದ್ದಾರೆ ಎಂದು ಹೇಳಿದರು.

ಪ್ರಧಾನ ಮಂತ್ರಿ ಆವಾಸ್ ಯೋಜನೆ, ಜಲ್ ಜೀವನ್ ಮಿಷನ್, ಫಸಲ್ ಬಿಮಾ ಯೋಜನೆ, ಪಿಎಂ ಸ್ವನಿಧಿ, ಡಿಜಿಟಲ್ ಇಂಡಿಯಾ, ಜನಧನ್, ಕಿಸಾನ್ ಸಮ್ಮಾನ್ ನಿಧಿ, ಆಯುಷ್ಮಾನ್ ಭಾರತ್, ಸ್ಟಾರ್ಟ್‌ಅಪ್ ಇಂಡಿಯಾ ಹಾಗೂ ಸ್ಟ್ಯಾಂಡ್‌ಅಪ್ ಇಂಡಿಯಾ ಸೇರಿದಂತೆ ಹಲವು ಮಹತ್ವಾಕಾಂಕ್ಷಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಕೋಟ್ಯಂತರ ಜನರ ಬದುಕಿನಲ್ಲಿ ಪರಿವರ್ತನೆ ತಂದಿದ್ದಾರೆ ಎಂದು ಶ್ಲಾಘಿಸಿದರು.

ದೇಶದ ಭದ್ರತೆ ಹಾಗೂ ಏಕತೆಯ ವಿಚಾರದಲ್ಲಿ ಮೋದಿ ಅವರು ಎಂದಿಗೂ ರಾಜಿ ಮಾಡಿಕೊಳ್ಳದೆ ದಿಟ್ಟ ನಿರ್ಧಾರಗಳನ್ನು ಕೈಗೊಂಡಿದ್ದಾರೆ. ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡಿದ್ದ ವಿಧಿ 370 ರದ್ದು, ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ನಿರ್ಮಾಣ ಸೇರಿದಂತೆ ಹಲವು ಐತಿಹಾಸಿಕ ನಿರ್ಧಾರಗಳ ಮೂಲಕ ದೇಶದ ಆಶೋತ್ತರಗಳಿಗೆ ಸ್ಪಂದಿಸಿದ್ದಾರೆ ಎಂದು ಹೇಳಿದರು.

ಇಂದು ಭಾರತವು ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದ್ದು, ಜಾಗತಿಕ ವೇದಿಕೆಯಲ್ಲಿ ತನ್ನ ಪ್ರಭಾವವನ್ನು ಮತ್ತಷ್ಟು ವಿಸ್ತರಿಸಿದೆ. ಭಾರತದ ಏಳಿಗೆಗಾಗಿ ತಮ್ಮ ಬದುಕನ್ನೇ ಮುಡಿಪಾಗಿಟ್ಟಿರುವ ಪ್ರಧಾನಿ ಮೋದಿ ಅವರಂತಹ ನಾಯಕತ್ವ ದೇಶಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ವಿಜಯಕುಮಾರ ಗಡ್ಡಿ ತಿಳಿಸಿದ್ದಾರೆ.

ಬಾಕಿ ಪ್ರಕರಣಗಳ ಸೌಹಾರ್ದಯುತ ಇತ್ಯರ್ಥಕ್ಕೆ ಇಲಾಖೆಗಳ ಮೇಲೆ ಮುಖ್ಯ ಕಾರ್ಯದರ್ಶಿ ಕಟ್ಟುನಿಟ್ಟಿನ ಸೂಚನೆ

# ಲೋಕ್ ಅದಾಲತ್‌ಗೆ ರಾಜ್ಯಾದ್ಯಂತ ಸಕಲ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸುಪ್ರೀಂ ಕೋರ್ಟ್ ನೇತೃತ್ವದಲ್ಲಿ ಆಗಸ್ಟ್ 21ರಿಂದ 23ರವರೆಗೆ ನಡೆಯಲಿರುವ 'ಸಮಾಧಾನ್ ಸಮಾರೋಹ್' (ಲೋಕ್ ಅದಾಲತ್) ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ರಾಜ್ಯದ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ನಿರ್ದೇಶನ ನೀಡಿದ್ದಾರೆ.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಮನವಿಯ ಮೇರೆಗೆ ಹೊರಡಿಸಿರುವ ಸೂಚನೆಯಲ್ಲಿ, ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಸರ್ಕಾರಿ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಉಚಿತ ಲೋಕ್ ಅದಾಲತ್ ಮೂಲಕ ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳುವಂತೆ ಇಲಾಖೆ ಮುಖ್ಯಸ್ಥರಿಗೆ ಸೂಚಿಸಲಾಗಿದೆ.

ಕೈಗೊಂಡ ಕ್ರಮಗಳ ಕುರಿತು ಮೂರು ದಿನಗಳೊಳಗೆ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ವರದಿ ಸಲ್ಲಿಸಿ, ಅದರ ಪ್ರತಿಯನ್ನು ಮುಖ್ಯ ಕಾರ್ಯದರ್ಶಿಗಳ ಕಚೇರಿಗೂ ಕಳುಹಿಸಬೇಕು ಎಂದು ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಲಾಗಿದೆ.

ಕಂದಾಯ, ಪೊಲೀಸ್, ಕೆಜಿಐಡಿ, ವಿಮಾ ಸಂಸ್ಥೆಗಳು, ಖಾಸಗಿ ಕಾರ್ಪೊರೇಷನ್‌ಗಳು ಸೇರಿದಂತೆ ವಿವಿಧ ಇಲಾಖೆಗಳು ಜಿಲ್ಲಾ, ತಾಲೂಕು ಹಾಗೂ ಹೈಕೋರ್ಟ್ ಕಾನೂನು ಸೇವೆಗಳ ಪ್ರಾಧಿಕಾರಗಳೊಂದಿಗೆ ಸಮನ್ವಯ ಸಾಧಿಸಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ನಿರ್ದೇಶನದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದ್ದು, ಇಲಾಖಾ ಮುಖ್ಯಸ್ಥರು ವೈಯಕ್ತಿಕ ಆಸಕ್ತಿ ವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕಾರ್ತಿಕ್ ಶಿಗ್ಲಿಮಠ್ ನೇತೃತ್ವದಲ್ಲಿ 'ಏಕ್ ಪೇಡ್ ಮಾಂ ಕೆ ನಾಮ್' ಅಭಿಯಾನಕ್ಕೆ ಜನಬೆಂಬಲ

# ತಾಯಿಯ ಹೆಸರಲ್ಲಿ ಒಂದು ಸಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದು ನಾವು ನೆಡುವ ಸಸಿಗಳೇ ಮುಂದಿನ ಪೀಳಿಗೆಗೆ ನೀಡುವ ಅಮೂಲ್ಯ ಆಸ್ತಿಯಾಗಿದ್ದು, ಹಸಿರು ಪರಿಸರವೇ ಆರೋಗ್ಯಕರ ಸಮಾಜದ ಅಡಿಪಾಯವಾಗಿದೆ ಎಂದು ಯುವ ನಾಯಕ ಹಾಗೂ ಉದ್ಯಮಿ ಕಾರ್ತಿಕ್ ಶಿಗ್ಲಿಮಠ್ ಹೇಳಿದರು.

ವಿಶ್ವ ಪರಿಸರ ದಿನದ ಅಂಗವಾಗಿ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ 'ಏಕ್ ಪೇಡ್ ಮಾಂ ಕೆ ನಾಮ್' ಅಭಿಯಾನಕ್ಕೆ ಬೆಂಬಲ ಸೂಚಿಸುವ ನಿಟ್ಟಿನಲ್ಲಿ ನಗರದಲ್ಲಿ ಆಯೋಜಿಸಿದ್ದ ಸಸಿ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪರಿಸರ ಸಂರಕ್ಷಣೆ ಇಂದಿನ ಅಗತ್ಯವಾಗಿದ್ದು, ಪ್ರತಿಯೊಬ್ಬರೂ ತಮ್ಮ ತಾಯಿಯ ಹೆಸರಿನಲ್ಲಿ ಒಂದು ಸಸಿಯನ್ನು ನೆಟ್ಟು ಪೋಷಿಸುವ ಮೂಲಕ ಪ್ರಕೃತಿ ಉಳಿವಿನ ಕಾರ್ಯದಲ್ಲಿ ಭಾಗಿಯಾಗಬೇಕು ಎಂದು ಕರೆ ನೀಡಿದರು.



> "ಇಂದು ನೆಡುವ ಒಂದು ಸಸಿ, ನಾಳೆಯ ಪೀಳಿಗೆಗೆ ನೆರಳು, ಶುದ್ಧ ಗಾಳಿ ಮತ್ತು ಆರೋಗ್ಯಕರ ಬದುಕನ್ನು ನೀಡುತ್ತದೆ. ಪ್ರತಿಯೊಬ್ಬರೂ ತಮ್ಮ ತಾಯಿಯ ಹೆಸರಿನಲ್ಲಿ ಒಂದು ಸಸಿ ನೆಟ್ಟು ಪರಿಸರ ಸಂರಕ್ಷಣೆಯ ಸಂಕಲ್ಪ ಮಾಡಬೇಕು."
> – **ಕಾರ್ತಿಕ್ ಶಿಗ್ಲಿಮಠ್,** ಯುವ ನಾಯಕ ಹಾಗೂ ಉದ್ಯಮಿ

ಕಳೆದ ವರ್ಷ 111 ಸಸಿಗಳನ್ನು ವಿತರಿಸಲಾಗಿತ್ತು. ಈ ಬಾರಿ 222 ಸಸಿಗಳನ್ನು ವಿತರಿಸುವ ಮೂಲಕ ಹಸಿರು ಅಭಿಯಾನವನ್ನು ಮತ್ತಷ್ಟು ವಿಸ್ತರಿಸಲಾಗಿದೆ. ಪರಿಸರದ ಸಮತೋಲನ ಕಾಪಾಡಲು ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕೆಂದು ಹೇಳಿದರು.

ಕಾಂರ್ುಕ್ರವ್ುದಲ್ಲಿ ಮಾತನಾಡಿದ ಉದ್ಯಮಿ ಸನ್ಮಿತ್ ಶಾ, ಪರಿಸರ ಉಳಿವಿನಂತಹ ಕಾರ್ಯಗಳು ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತವೆ. ಪರಿಸರ ಸಂರಕ್ಷಣೆ ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕನ ಕರ್ತವ್ಯವೂ ಆಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಈಶ್ವರ ಕರ್ಮುಡಿ, ಸಂದೇಶ್ ಗಾಯಕವಾಡ, ಅಮಿತ್ ಗಾಯಕವಾಡ, ಫಕೀರಡ್ಡಿ ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನೆಹರೂ ದಾಖಲೆ ಹಿಂದಿಕ್ಕಿದ ಪ್ರಧಾನಿ; ಸೋಮೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ

# ಮೋದಿ 12 ವರ್ಷಗಳ ಆಡಳಿತಕ್ಕೆ ಬಿಜೆಪಿ ಸಂಭ್ರಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದ ಪ್ರಧಾನಿಯಾಗಿ ಸತತ 12 ವರ್ಷಗಳ ಕಾಲ ಸೇವೆ ಸಲ್ಲಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು ಮಾಜಿ ಪ್ರಧಾನಿ ಜವಾಹರಲಾಲ್ ನೆಹರೂ ಅವರ ದಾಖಲೆಯನ್ನು ಹಿಂದಿಕ್ಕಿ ಸ್ವಾತಂತ್ರ್ಯೋತ್ತರ ಭಾರತದ ಸುದೀರ್ಘ ಸೇವೆ ಸಲ್ಲಿಸಿದ ಪ್ರಧಾನಿಯಾಗಿ ಇತಿಹಾಸ ನಿರ್ಮಿಸಿದ್ದಾರೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಪಟ್ಟಣದ ಐತಿಹಾಸಿಕ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಪ್ರಧಾನಿ ಮೋದಿ ಅವರು ಪ್ರಧಾನಿಯಾಗಿ 12 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಶಿರಹಟ್ಟಿ ಬಿಜೆಪಿ ಮಂಡಲ ಹಾಗೂ ನಗರ ಘಟಕದಿಂದ ಆಯೋಜಿಸಿದ್ದ ವಿಶೇಷ ಪೂಜೆ ಹಾಗೂ ಸಿಹಿ ಹಂಚುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೇಂದ್ರದಲ್ಲಿ ಯುಪಿಎ ಸರ್ಕಾರದ ವಿರುದ್ಧ ದೇಶಾದ್ಯಂತ



ಬಿಜೆಪಿ ಅಲೆ ಸೃಷ್ಟಿಸಿ, ಸತತ ಮೂರು ಲೋಕಸಭಾ ಚುನಾವಣೆಯಲ್ಲಿ ಜಯ ಸಾಧಿಸಿದ ಮೋದಿ ಅವರು ಹಿಂದುತ್ವ, ಸಾಂಸ್ಕೃತಿಕ ರಾಷ್ಟ್ರೀಯತೆ ಹಾಗೂ ಅಭಿವೃದ್ಧಿಯ ಮಂತ್ರದೊಂದಿಗೆ ದೇಶವನ್ನು ಅಭಿವೃದ್ಧಿಯ ಗಿರಿಶಿಖರದತ್ತ ಕೊಂಡೊಯ್ಯುತ್ತಿದ್ದಾರೆ ಎಂದು ಹೇಳಿದರು.

ಬಿಜೆಪಿ ಕಾರ್ಯಕರ್ತರ ಪರಿಶ್ರಮವೇ ಈ ಯಶಸ್ಸಿನ ಹಿಂದೆ ದೊಡ್ಡ ಶಕ್ತಿ ಎಂದು ಅವರು ತಿಳಿಸಿದರು.

> "ಸಬ್‌ಕಾ ಸಾಥ್, ಸಬ್‌ಕಾ ವಿಕಾಸ್, ಸಬ್‌ಕಾ ವಿಶ್ವಾಸ್ ಧ್ಯೇಯದೊಂದಿಗೆ ಮೋದಿ ನಾಯಕತ್ವದಲ್ಲಿ ಭಾರತ ಅಭಿವೃದ್ಧಿಯ ಪಥದಲ್ಲಿ ಸಾಗುತ್ತಿದೆ"
> – **ಡಾ. ಚಂದ್ರು ಲಮಾಣಿ, ಶಾಸಕ**

ಇದೇ ಸಂದರ್ಭದಲ್ಲಿ ಭಾರತೀಯ ಸೇನೆಯ ಅಗ್ನಿಪಥ್ ಯೋಜನೆಯಡಿ ಅಗ್ನಿವೀರರಾಗಿ ಆಯ್ಕೆಯಾಗಿರುವ ಪ್ರಕಾಶ ಕುಂಬಾರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಚಂಬಣ್ಣ ಬಾಳಿಕಾಯಿ, ಗಂಗಾಧರ ಮೆಣಸಿನಕಾಯಿ, ಪ್ರವೀಣ ಬೋಮಲೆ, ಬಸವರಾಜ ಚಕ್ರಸಾಲಿ, ನಿಂಗಪ್ಪ ಬನ್ನಿ, ನೀಲಪ್ಪ ಹತ್ತಿ, ದುಂಡೇಶ ಕೋಟಗಿ, ಅನೀಲ ಮುಳಗುಂದ, ವೀರಣ್ಣ ಅಕ್ಕೂರ, ಈರಣ್ಣ ಪೂಜಾರ, ಸಂತೋಷ ಜಾವೂರ, ಮಂಜುನಾಥ ಗಜಾಕೋಶ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಶಿಗ್ಲಿ ಶಾಲೆಯಲ್ಲಿ ಆರೋಗ್ಯ ಇಲಾಖೆಯಿಂದ ಜಾಗೃತಿ ಕಾರ್ಯಕ್ರಮ

# ಮಲೇರಿಯಾ ತಡೆಗೆ ಸ್ವಚ್ಛತೆಯೇ ಅಸ್ತ್ರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಗ್ರಾಮದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಲೇರಿಯಾ ವಿರೋಧಿ ಮಾಸಾಚರಣೆ ಅಂಗವಾಗಿ ಆರೋಗ್ಯ ಜಾಗೃತಿ ಕಾರ್ಯಕ್ರಮ ಬುಧವಾರ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಹಿರಿಯ ಆರೋಗ್ಯ ನಿರೀಕ್ಷಕ ಎಫ್.ಸಿ. ಹೊಸಮಠ, ಮಲೇರಿಯಾ ಹೆಣ್ಣು ಅನಾಫಿಲಿಸ್ ಸೊಳ್ಳೆ ಕಚ್ಚುವುದರಿಂದ ಹರಡುವ ಕೀಟಜನ್ಯ ರೋಗವಾಗಿದ್ದು, ಸೊಳ್ಳೆಗಳ ನಿಯಂತ್ರಣಕ್ಕೆ ಸ್ವಚ್ಛತೆ ಅತ್ಯಂತ ಅಗತ್ಯ ಎಂದು ಹೇಳಿದರು.

ಸೊಳ್ಳೆಗಳು ಸಾಮಾನ್ಯವಾಗಿ ಹಣ್ಣು ಮತ್ತು ಎಲೆಗಳ ರಸವನ್ನು ಆಹಾರವಾಗಿ ಸೇವಿಸುತ್ತವೆ. ಸಂತಾನೋತ್ಪತ್ತಿಗಾಗಿ ಮಾತ್ರ ರಕ್ತ ಹೀರುತ್ತವೆ. ಒಂದು ಸೊಳ್ಳೆ ತನ್ನ ಜೀವಿತಾವಧಿಯಲ್ಲಿ




ಸುಮಾರು 1800 ಮರಿಗಳನ್ನು ಉತ್ಪಾದಿಸಬಲ್ಲದು. ಆದ್ದರಿಂದ ಮರಿಗಳ ಹಂತದಲ್ಲಿಯೇ ಅವುಗಳನ್ನು ನಾಶಪಡಿಸುವುದು ಮುಖ್ಯ ಎಂದು ತಿಳಿಸಿದರು.

ಸಂಗ್ರಹ ನೀರು, ನೀರಿನ ಕೊಳಾಯಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತೆ ಕಾಪಾಡುವುದರಿಂದ ಮಲೇರಿಯಾ ಸೇರಿದಂತೆ ಸೊಳ್ಳೆಜನ್ಯ ರೋಗಗಳನ್ನು ನಿಯಂತ್ರಿಸಬಹುದು ಎಂದು ಹೇಳಿದರು.

> "ಚರಂಡಿ ಹಾಗೂ ಮನೆಯ ಸುತ್ತ ನೀರು ನಿಲ್ಲದಂತೆ ನೋಡಿಕೊಂಡರೆ ಮಲೇರಿಯಾ ಹರಡುವಿಕೆಯನ್ನು ತಡೆಯಬಹುದು"
> – ಎಫ್.ಸಿ. ಹೊಸಮಠ

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿ.ಕೆ. ಹತ್ತಿಕಾಳ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಆರ್.ಡಿ. ಕಲಾಯಗಾರ, ಬಿ.ಜಿ. ಬಣಗಾರ, ಎಸ್.ಬಿ. ಅಣ್ಣಿಗೇರಿ, ಎಲ್. ತಿಪ್ಪನಾಯ್ಕ್, ಸುಧಾ ಪಪ್ಪಿ ಹಾಗೂ ಆರೋಗ್ಯ ಇಲಾಖೆಯ ರವಿ ಪುಥಳೀಕರ ಉಪಸ್ಥಿತರಿದ್ದರು.

ದೀಪಾ ಭಸ್ಮೆ ಕಾರ್ಯಕ್ರಮ ನಿರ್ವಹಿಸಿದರು.

## ಆ. 30ರಂದು ಸಾಮೂಹಿಕ ವಿವಾಹ ಮಹೋತ್ಸವ

▶▶ಮೊದಲನೇ ಪುಟದಿಂದ

ಹೆಚ್ಚಿನ ಮಾಹಿತಿಗಾಗಿ 97419 78359 ಹಾಗೂ 97431 39749 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ.

ಸುದ್ದಿಗೋಷ್ಠಿಯಲ್ಲಿ ಶಫಿ ಅಹ್ಮದ್ ನವಲಗುಂದ, ಫಯಾಜ್ ನಾರಾಯಣಕೇರಿ, ಮೈಬೂಬು ಪತ್ತೇದಾರ, ಅನ್ವರ್ ಈಟಿ, ಬಾಬುಸಾಬ್ ನಾರಾಯಣಕೇರಿ, ಆರ್.ಎಲ್. ಹೊಂಬಳ, ಅಬ್ದುಲ್ ಸಾಬ್ ಬೆಳೇರಿ, ಕಾಸಿಂಸಾಬ್ ಹವಾಲ್ದಾರ, ನಿಜಾಮುದ್ದೀನ್ ಕಾತರಕಿ ಸೇರಿದಂತೆ ಕಮಿಟಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಸರಣಿ ಮನೆಗಳ್ಳತನಕ್ಕೆ ಗದಗ ಪೊಲೀಸರ ಬ್ರೇಕ್

▶▶ಮೊದಲನೇ ಪುಟದಿಂದ

ಈ ತಂಡದಲ್ಲಿ ಸಿಬ್ಬಂದಿಗಳಾದ ಜಿ.ಬಿ. ಬಳ್ಳಾರಿ, ಅಶೋಕ ಬೂದಿಹಾಳ, ಮಂಜುನಾಥ ಅಗಸಿಮನಿ, ಗಂಗಾಧರ ಮಜ್ಜಿಗಿ, ಮಹೇಶ ಗೊಳಗೊಳಕಿ, ಚಂದ್ರಶೇಖರ ದೊಡ್ಡಮನಿ, ಕಿರಣ ಹಿರೇಮಠ, ಮಂಜು ಬಂಡಿವಡ್ಡರ ಹಾಗೂ ಶಿವು ಹುಬ್ಬಳ್ಳಿ ಭಾಗವಹಿಸಿದ್ದರು.

ತಾಂತ್ರಿಕ ವಿಭಾಗದ ಖಲಂದರ ನದಾಫ್, ಗುರು ಬೂದಿಹಾಳ ಹಾಗೂ ಸಂಜು ಕೋರಡೂರ ಸಹ ಕಾರ್ಯಾಚರಣೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ಯಶಸ್ವಿ ಕಾರ್ಯಾಚರಣೆ ನಡೆಸಿದ ಪೊಲೀಸ್ ತಂಡಕ್ಕೆ ಸೂಕ್ತ ಬಹುಮಾನ ಘೋಷಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ತಿಳಿಸಿದರು.

**ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಜನಜಾಗೃತಿ ಜಾಥಾ; ಮಕ್ಕಳನ್ನು ಶಿಕ್ಷಣದ ಮುಖ್ಯವಾಹಿನಿಗೆ ತರಲು ನ್ಯಾಯಾಧೀಶ ಶಿವನಗೌಡ್ರ ಕರೆ**

# ಮಕ್ಕಳ ಕೈಗೆ ಕೆಲಸವಲ್ಲ, ಪುಸ್ತಕ ಕೊಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಕೈಗೆ ಕೆಲಸವಲ್ಲ, ಶಿಕ್ಷಣದ ಬೆಳಕು ತಲುಪಿಸಬೇಕೆಂಬ ಸಂದೇಶದೊಂದಿಗೆ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ಅಂಗವಾಗಿ ಗದಗ ನಗರದಲ್ಲಿ ಗುರುವಾರ ಬೃಹತ್ ಜನಜಾಗೃತಿ ಜಾಥಾ ನಡೆಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ (ರಿ) ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಜಾಥಾಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹಾಗೂ ಹಿರಿಯ ದಿವಾಣಿ ನ್ಯಾಯಾಧೀಶ ಸಿ.ಎಸ್. ಶಿವನಗೌಡ್ರ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಶಿವನಗೌಡ್ರ ಅವರು, ಮಕ್ಕಳು ದೇಶದ ಭವಿಷ್ಯವಾಗಿದ್ದು, ಅವರನ್ನು ಬಾಲಕಾರ್ಮಿಕ ಪದ್ಧತಿಯಿಂದ ಮುಕ್ತಗೊಳಿಸಿ ಶಿಕ್ಷಣದ ಮುಖ್ಯವಾಹಿನಿಗೆ ತರುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

14 ವರ್ಷದೊಳಗಿನ ಮಕ್ಕಳನ್ನು ಹೋಟೆಲ್, ಗ್ಯಾರೇಜ್, ಕಟ್ಟಡ ಕಾಮಗಾರಿ ಸೇರಿದಂತೆ ಯಾವುದೇ ಉದ್ಯಮಗಳಲ್ಲಿ ಕೆಲಸಕ್ಕೆ ನೇಮಿಸುವುದು



ಕಾನೂನುಬಾಹಿರವಾಗಿದ್ದು, ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ಸಾರ್ವಜನಿಕರು ತಮ್ಮ ಸುತ್ತಮುತ್ತ ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದಲ್ಲಿ ಕೂಡಲೇ ಸಂಬಂಧಿಸಿದ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಮನವಿ ಮಾಡಿದರು.

ಗದಗ-ಬೆಟಗೇರಿ ನಗರಸಭೆ ಆವರಣದಿಂದ ಆರಂಭವಾದ ಜಾಥಾ ಮಹಾತ್ಮ ಗಾಂಧಿ ವೃತ್ತ, ಮಹೇಂದ್ರಕರ್ ಸರ್ಕಲ್, ಟಾಂಗಕೂಟ, ಹಳೆ ಬಸ್ ನಿಲ್ದಾಣ, ರೋಟರಿ ಸರ್ಕಲ್ ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಬಾಲಕಾರ್ಮಿಕ ಪದ್ಧತಿ ವಿರುದ್ಧ ಜಾಗೃತಿ ಮೂಡಿಸಿತು.

ಜಾಥಾದಲ್ಲಿ ಭಾಗವಹಿಸಿದ್ದ ನೂರಾರು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು "ಬಾಲಕಾರ್ಮಿಕ ಪದ್ಧತಿ ತೊಲಗಲಿ, ಮಕ್ಕಳ ಭವಿಷ್ಯ ಬೆಳಗಲಿ", "ಮಕ್ಕಳಿಗೆ ಕೆಲಸ ಬೇಡ, ಅಕ್ಷರ ನೀಡಿ" ಎಂಬ ಘೋಷಣೆಗಳನ್ನು ಕೂಗಿ ಜನರಲ್ಲಿ ಅರಿವು ಮೂಡಿಸಿದರು.

> "ಶಾಲೆಗೆ ಹೋಗಬೇಕಾದ ವಯಸ್ಸಿನಲ್ಲಿ ಮಕ್ಕಳನ್ನು ದುಡಿಮೆಗೆ ತಳ್ಳುವುದು ಅಪರಾಧ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಪ್ರತಿಯೊಬ್ಬ ನಾಗರಿಕರೂ ಕೈಜೋಡಿಸಬೇಕು."
>
> **-ಶಿವನಗೌಡ್ರ,** ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಜಯದೇವಿ ಕವಲೂರು, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಹಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಮಣ್ಣೂರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಯಶ್ರೀ ಆರ್., ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ದುರಾಸೆಯಿಂದ ಪ್ರಕೃತಿ ನಾಶ; ಸಮತೋಲನ ಕಾಪಾಡಲು ಶ್ರೀಗಳ ಕರೆ**

## ಪರಿಸರ ರಕ್ಷಣೆ ನಮ್ಮೆಲ್ಲರ ಮೊದಲ ಆದ್ಯತೆ



■ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರದ ಅಸಮತೋಲನ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಮನುಷ್ಯನ ಅತಿಯಾದ ದುರಾಸೆಯೇ ಇದಕ್ಕೆ ಪ್ರಮುಖ ಕಾರಣವಾಗಿದೆ. ಆರೋಗ್ಯಕರ ಜೀವನಕ್ಕಾಗಿ ಪರಿಸರ ಸಂರಕ್ಷಣೆ ಅತ್ಯಗತ್ಯವಾಗಿದ್ದು, ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆಗಾರಿಕೆಯಾಗಿದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ನಗರದ ಲಿಂಗಾಯತ ಪ್ರಗತಿಶೀಲ ಸಂಘದಲ್ಲಿ ನಡೆದ 2801ನೇ ಶಿವಾನುಭವ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದ ಅವರು, ಅಭಿವೃದ್ಧಿಯ ಹೆಸರಿನಲ್ಲಿ ಸಹಜ ಪರಿಸರವನ್ನು ನಾಶಪಡಿಸಿ ಕಾಂಕ್ರೀಟ್ ಕಾಡುಗಳನ್ನು ನಿರ್ಮಿಸಲಾಗುತ್ತಿದೆ. ಇದರ ಪರಿಣಾಮವಾಗಿ ನೀರು, ಗಾಳಿ ಹಾಗೂ ಆಹಾರದಲ್ಲಿ ವಿಷಕಾರಿ ಅಂಶಗಳು ಸೇರಿ ಮಾನವ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಅಂತರಾಷ್ಟ್ರೀಯ ಪರಿಸರ ದಿನಾಚರಣೆ ಅಂಗವಾಗಿ ಉಪನ್ಯಾಸ ನೀಡಿದ ಪ್ರೊ. ಸಿ.ಎಸ್. ಅರಸನಾಳ, ಪ್ರಕೃತಿ ತನ್ನ ಸಮತೋಲನ ಕಾಪಾಡಿಕೊಳ್ಳಲು ಹಲವು ಸಂಕೇತಗಳನ್ನು ನೀಡುತ್ತಿದ್ದರೂ ಮನುಷ್ಯ ಅದನ್ನು ನಿರ್ಲಕ್ಷಿಸುತ್ತಿದ್ದಾನೆ. ಗಿಡಮರಗಳ ನಾಶದಿಂದ ಶುದ್ಧ ಗಾಳಿ, ನೀರು ಮತ್ತು ಆಹಾರಕ್ಕಾಗಿ ಪರಿತಪಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಪ್ರತಿಯೊಬ್ಬರೂ ಗಿಡ ನೆಟ್ಟು ಅವುಗಳ ಸಂರಕ್ಷಣೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಅಣ್ಣಿಗೇರಿ ಶಾಲೆಯ ಶಿಕ್ಷಕ ವಿ.ಎಂ. ಹಿರೇಮಠ ಅವರನ್ನು ಪರಿಸರ ಸಂರಕ್ಷಣೆಯಲ್ಲಿ ಸಲ್ಲಿಸಿರುವ ಸೇವೆಗಾಗಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸನ್ಮಾನಿಸಿ ಆಶೀರ್ವದಿಸಿದರು. ಮನೆ, ಶಾಲೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಗಿಡಮರಗಳನ್ನು ಬೆಳೆಸಿ ಪರಿಸರ ಸಂರಕ್ಷಣೆಗೆ ಕೊಡುಗೆ ನೀಡುತ್ತಿರುವ ಅವರ ಕಾರ್ಯವನ್ನು ಪ್ರಶಂಸಿಸಲಾಯಿತು.

ಇದೇ ವೇಳೆ ಶ್ರೀಮಠದ ಆವರಣವನ್ನು ನಿತ್ಯ ಸ್ವಚ್ಛಗೊಳಿಸುತ್ತಿರುವ ಶ್ರೀಮತಿ ಚೌರಮ್ಮ ಕರಿಗಾರ ಹಾಗೂ ನಗರಸಭೆ ಮತ್ತು ಆಸ್ಪತ್ರೆಗಳ ತ್ಯಾಜ್ಯವನ್ನು ಸುರಕ್ಷಿತವಾಗಿ ವಿಲೇವಾರಿ ಮಾಡುತ್ತಿರುವ ಸಿಬ್ಬಂದಿಯನ್ನು ಅಭಿನಂದಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ. ಉಮೇಶ ವಿ. ಪುರದ ಸ್ವಾಗತಿಸಿದರು. ಶ್ರೀಮತಿ ಸುರೇಖಾ ಪಿಳ್ಳಿ ಕಾರ್ಯಕ್ರಮ ನಿರೂಪಿಸಿದರು. ಮೃತ್ಯುಂಜಯ ಹಾಗೂ ಸುತಾರ ವಚನ ಸಂಗೀತ, ಭೂಮಿಕಾ ಕೆ. ತುಕ್ಕಪ್ಪನವರ ಧರ್ಮಗ್ರಂಥ ಪಠಣ, ಬಸವರಾಜ ಕೆ. ತುಕ್ಕಪ್ಪನವರ ವಚನ ಚಿಂತನೆ ನಡೆಸಿಕೊಟ್ಟರು. ಆರಂಭದಲ್ಲಿ ಡಾ. ನಿಂಗೂ ಸೊಲಗಿ ಪರಿಸರ ಗೀತೆಗಳನ್ನು ಪ್ರಸ್ತುತಪಡಿಸಿದರು.

ವೇದಿಕೆಯಲ್ಲಿ ಶ್ರೀಮತಿ ಪ್ರಭಾವತಿ ಕಲ್ಲನಗೌಡರ ಉಪಸ್ಥಿತರಿದ್ದರು. ಶಿವಾನುಭವ ಸಮಿತಿಯ ಚೇರ್ಮನ್ ಡಾ. ರಮೇಶ ಮ. ಕಲ್ಲನಗೌಡರ, ಉಪಾಧ್ಯಕ್ಷ ಪ್ರಭು ಗಂಜಿಹಾಳ, ಕಾರ್ಯದರ್ಶಿ ಸಿದ್ಧರಾಮ ಪಟ್ಟೇದ, ಸಹಕಾರ್ಯದರ್ಶಿ ಪ್ರತಿಭಾ ಬಡ್ನಿ, ಕೋಶಾಧ್ಯಕ್ಷ ವೀರಣ್ಣ ಗೋಟಡಕಿ ಸೇರಿದಂತೆ ಪದಾಧಿಕಾರಿಗಳು ಹಾಗೂ ಭಕ್ತರು ಭಾಗವಹಿಸಿದ್ದರು.

**ಸಮತೋಲಿತ ಗೊಬ್ಬರ ಬಳಕೆ, ಬೀಜೋಪಚಾರಕ್ಕೆ ಒತ್ತು; ಮಣ್ಣಿನ ಆರೋಗ್ಯ ಕಾಪಾಡಲು ಜಾಗೃತಿ ಅಭಿಯಾನ**

## 'ಖೇತ್ ಬಚಾವೋ' ಅಭಿಯಾನಕ್ಕೆ ರೈತರಿಂದ ಮೆಚ್ಚುಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಣ್ಣಿನ ಆರೋಗ್ಯ ಸಂರಕ್ಷಣೆ, ಕೃಷಿ ವೆಚ್ಚ ಕಡಿತ ಹಾಗೂ ರೈತರ ಆದಾಯ ಹೆಚ್ಚಿಸುವ ಉದ್ದೇಶದಿಂದ ಕೃಷಿ ಇಲಾಖೆ ಮತ್ತು ಕೃಷಿ ವಿಜ್ಞಾನ ಕೇಂದ್ರ ಹುಲಕೋಟಿ ಸಂಯುಕ್ತ ಆಶ್ರಯದಲ್ಲಿ ಖೇತ್ ಬಚಾವೋ ಅಭಿಯಾನದಡಿ ಸಮತೋಲಿತ ರಸಗೊಬ್ಬರ ಬಳಕೆ ಹಾಗೂ ಬೀಜೋಪಚಾರ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.




ಗದಗ ತಾಲೂಕಿನ ಬೂದಿಶ್ವರ ಹೊಸಳ್ಳಿ ಹಾಗೂ ಶ್ಯಾಗೋಟಿ ಗ್ರಾಮಗಳಲ್ಲಿ ಜೂನ್ 8ರಂದು ನಡೆದ ಈ ಕಾರ್ಯಕ್ರಮದಲ್ಲಿ ರೈತರಿಗೆ ಮಣ್ಣಿನ ಫಲವತ್ತತೆ ಕಾಪಾಡುವ ವಿಧಾನಗಳು, ಸಮತೋಲಿತ ಗೊಬ್ಬರ ಬಳಕೆ, ಜೈವಿಕ ಕೃಷಿ ಪದ್ಧತಿಗಳು, ನೀರಿನ ಸಂರಕ್ಷಣೆ ಹಾಗೂ ಸಮಗ್ರ ಕೀಟ ನಿರ್ವಹಣೆ ಕುರಿತು ತಜ್ಞರು ಮಾಹಿತಿ ನೀಡಿದರು.

ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಮಣ್ಣು ಪರೀಕ್ಷೆಯ ಮಹತ್ವವನ್ನು ವಿವರಿಸಿ, ಬಿತ್ತನೆಗೂ ಮುನ್ನ ಬೀಜೋಪಚಾರ ಮಾಡುವ ವಿಧಾನವನ್ನು ಪ್ರಾಯೋಗಿಕವಾಗಿ ಪ್ರದರ್ಶಿಸಿದರು. ಇದರಿಂದ ಬೆಳೆ ರೋಗಗಳನ್ನು ತಡೆಗಟ್ಟುವ ಜೊತೆಗೆ ಉತ್ತಮ ಇಳುವರಿ ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕೃಷಿ ಇಲಾಖೆ ಅಧಿಕಾರಿಗಳು ಸರ್ಕಾರದ ವಿವಿಧ ಯೋಜನೆಗಳು, ಸಬ್ಸಿಡಿ ಸೌಲಭ್ಯಗಳು ಹಾಗೂ ಕೃಷಿ ಯಂತ್ರೋಪಕರಣಗಳ ಬಳಕೆ ಕುರಿತು ರೈತರಿಗೆ ಮಾಹಿತಿ ನೀಡಿದರು. ಆಧುನಿಕ ಹಾಗೂ ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವಂತೆ ರೈತರಿಗೆ ಕರೆ ನೀಡಲಾಯಿತು.

ಕಾರ್ಯಕ್ರಮಕ್ಕೆ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಖೇತ್ ಬಚಾವೋ ಅಭಿಯಾನವು ಸಾವಯವ ಕೃಷಿಗೆ ಉತ್ತೇಜನ ನೀಡುವ ಜೊತೆಗೆ ಕೃಷಿ ಉತ್ಪಾದಕತೆ ಹೆಚ್ಚಿಸಲು ಸಹಕಾರಿಯಾಗಲಿದೆ ಎಂದು ಪ್ರಗತಿಪರ ರೈತರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ, ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್., ಎನ್.ಎಚ್. ಭಂಡಿ, ಪ್ರವೀಣ ಕರಿಕಟ್ಟಿ, ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು, ಕೃಷಿ ಅಧಿಕಾರಿಗಳಾದ ರಾಜರಾಜೇಶ್ವರಿ ಚಿನಿವಾರ, ಬಸವರಾಜೇಶ್ವರಿ ಸಜ್ಜನರ, ಪ್ರಗತಿಪರ ರೈತ ವಿಜಯಕುಮಾರ ಸುಂಕದ ಸೇರಿದಂತೆ ಹಲವರು ಭಾಗವಹಿಸಿದ್ದರು.

ಬೂದಿಶ್ವರ ಹೊಸಳ್ಳಿ, ಕುರ್ತಕೋಟಿ, ಶ್ಯಾಗೋಟಿ, ದುಂದೂರ ಹಾಗೂ ಚಿಕ್ಕಹಂದಿಗೋಳ ಗ್ರಾಮಗಳ ರೈತರು, ರೈತ ಮಹಿಳೆಯರು ಹಾಗೂ ಕೃಷಿ ಇಲಾಖೆಯ ಸಿಬ್ಬಂದಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

**ಎಂಸಿಎಸ್ ಶಾಲೆಯ ಹಳೆ ವಿದ್ಯಾರ್ಥಿಗಳಿಂದ ಜೂ.14ರಂದು 'ಗುರುವಂದನೆ**

## ಮೂರು ದಶಕಗಳ ಬಳಿಕ ಗುರುಗಳಿಗೆ ಶಿಷ್ಯರ ವಂದನೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮೂರು ದಶಕಗಳ ಹಿಂದೆ ಶಿಕ್ಷಣ ನೀಡಿದ ಗುರುಗಳಿಗೆ ಕೃತಜ್ಞತೆ ಸಲ್ಲಿಸುವ ಅಪರೂಪದ ಕಾರ್ಯಕ್ರಮವೊಂದನ್ನು ನರೇಗಲ್ಲ ಪಟ್ಟಣದ ಎಂಸಿಎಸ್ ಶಾಲೆಯ ಹಳೆ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದು, ಜೂನ್ 14ರಂದು 'ಗುರುವಂದನೆ' ಕಾರ್ಯಕ್ರಮ ಅದ್ಧೂರಿಯಾಗಿ ನಡೆಯಲಿದೆ.

ಪಟ್ಟಣದ ಸೈಬರ್‌ಟೆಕ್ ಕಂಪ್ಯೂಟರ್ ಕೇಂದ್ರದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ವಿರುಪಾಕ್ಷಪ್ಪ ಸಂಗನಾಳ, 1988-89ರಿಂದ 1995-96ರವರೆಗೆ ಎಂಸಿಎಸ್ ಶಾಲೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಒಗ್ಗೂಡಿ ಈ ಕಾರ್ಯಕ್ರಮ ಆಯೋಜಿಸಿದ್ದಾರೆ ಎಂದು ತಿಳಿಸಿದರು.

ಅಂದಿನ ಶಿಕ್ಷಕರು ನಮಗೆ ಶಿಸ್ತು, ಸಂಯಮ, ಮೌಲ್ಯಗಳು ಹಾಗೂ ಶಿಕ್ಷಣವನ್ನು ಕಲಿಸಿಕೊಟ್ಟ ಪರಿಣಾಮವೇ ಇಂದು ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸ್ಥಾನಮಾನ



ಪಡೆಯಲು ಸಾಧ್ಯವಾಗಿದೆ. ಜೀವನದ ದಾರಿದೀಪರಾದ ಗುರುಗಳ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ ಗುರುವಂದನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಶಿವಕುಮಾರ ಮುಳಗುಂದ ಮಾತನಾಡಿ, ಶಿಕ್ಷಕರ ಮಾರ್ಗದರ್ಶನವೇ ನಮ್ಮ ಬದುಕಿನ ಅಡಿಪಾಯವಾಗಿದೆ. ಅವರಿಗೆ ಗೌರವ ಸಲ್ಲಿಸುವ ಮೂಲಕ ನಮ್ಮ ಗುರುಭಕ್ತಿಯನ್ನು ವ್ಯಕ್ತಪಡಿಸುತ್ತಿದ್ದೇವೆ ಎಂದರು.

> "ನಮ್ಮನ್ನು ತಿದ್ದಿ-ತೀಡಿ ಬದುಕಿನ ದಾರಿ ತೋರಿದ ಗುರುಗಳ ಋಣವನ್ನು ಎಂದಿಗೂ ತೀರಿಸಲು ಸಾಧ್ಯವಿಲ್ಲ. ಅವರಿಗಿರುವ ಕೃತಜ್ಞತೆಯ ಸಂಕೇತವಾಗಿ ಗುರುವಂದನೆ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ."
>
> **-ವಿರುಪಾಕ್ಷಪ್ಪ ಸಂಗನಾಳ**

ಗುರುವಂದನೆ ಸ್ವೀಕರಿಸಲಿರುವ ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ ಮಾತನಾಡಿ, ನಮ್ಮ ಕಾಲದಲ್ಲಿ ಶಿಕ್ಷಕರು ಸಮರ್ಪಣಾ ಮನೋಭಾವದಿಂದ ಸೇವೆ ಸಲ್ಲಿಸುತ್ತಿದ್ದರು. ಆ ಸೇವೆಯನ್ನು ನೆನಪಿಸಿಕೊಂಡು ವಿದ್ಯಾರ್ಥಿಗಳು ಇಂದು ಸಲ್ಲಿಸುತ್ತಿರುವ ಗೌರವ ಅತ್ಯಂತ ಸಂತೋಷ ತಂದಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಂದ್ರಾಮ ಗ್ರಾಮಪುರೋಹಿತ ವಹಿಸಲಿದ್ದು, ಡಿಡಿಪಿಐ ಆರ್.ಎಸ್. ಬುರುಡಿ ಉದ್ಘಾಟಿಸಲಿದ್ದಾರೆ. ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎ. ಫಣಿಬಂದ ಸೇರಿದಂತೆ ಅನೇಕ ಗಣ್ಯರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ನಿವೃತ್ತ ಡಿಡಿಪಿಐ ಸಂಜೀವ ಬಿಂಗೇರಿ ಸೇರಿದಂತೆ ನಿವೃತ್ತ ಶಿಕ್ಷಕರಾದ ವೀರಪ್ಪ ಸಂಗನಾಳ, ಕುಸುಮವ್ವ ಭೀಮನಗೌಡ್ರ, ಶರಣಬಸಪ್ಪ ಬೂದಿಹಾಳ, ಅಂದಾನಪ್ಪ ಅಣಗೌಡ್ರ, ಎಂ.ಪಿ. ಬಸರೀಗಿಡದ, ನಿಂಗನಗೌಡ ಚಿಕ್ಕನಗೌಡ್ರ, ಬಸವನಗೌಡ ಗೌಡರ, ಸಿ.ಬಿ. ಹಿರೇಮಠ, ಗೀತಾ ಗುಜ್ಜಲ ಹಾಗೂ ಮಲ್ಲವ್ವ ಸಕ್ರೋಜಿ ಅವರನ್ನು ಸನ್ಮಾನಿಸಿ ಗುರುವಂದನೆ ಸಲ್ಲಿಸಲಾಗುವುದು.

ಪತ್ರಿಕಾಗೋಷ್ಠಿಯಲ್ಲಿ ಮೈಲಾರಪ್ಪ ಗೋಡಿ, ಶಿವಾನಂದ ಪದ್ಮಸಾಲಿ, ಉಮೇಶ ಪಾದಗಟ್ಟಿ, ಶಿವಪ್ಪ ತಳವಾರ, ಪ್ರಸನ್ನ ಗಚ್ಚಿನಮಠ, ಬಸವರಾಜ ಕುಷ್ಟಗಿ, ಮೆಹಬೂಬಸಾಬ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ತಾಂತ್ರಿಕ ಶಿಕ್ಷಣದ ಮೂಲಕ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಪ್ರಾಚಾರ್ಯ ಎಸ್.ಎಂ. ಶಿವರಾಚಯ್ಯ ನಿವೃತ್ತಿ**

## 35 ವರ್ಷಗಳ ಸೇವೆಯ ಸಾರ್ಥಕತೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ಶಿಕ್ಷಕ ವೃತ್ತಿಯನ್ನು ಕೇವಲ ಉದ್ಯೋಗವಲ್ಲ, ವಿದ್ಯಾರ್ಥಿಗಳ ಬದುಕು ರೂಪಿಸುವ ತಪಸ್ಸೆಂದು ಪರಿಗಣಿಸಿ 35 ವರ್ಷಗಳ ಕಾಲ ಸಾವಿರಾರು ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣದ ಮೂಲಕ ಭವಿಷ್ಯದ ದಾರಿ ತೋರಿದ ಜಗದ್ಗುರು ತೋಂಟದಾರ್ಯ ಐಟಿಐ ಕಾಲೇಜಿನ ಪ್ರಾಚಾರ್ಯ ಎಸ್.ಎಂ. ಶಿವರಾಚಯ್ಯ ಅವರು ಮೇ 31ರಂದು ಸೇವಾ ನಿವೃತ್ತಿ ಹೊಂದಿದ್ದಾರೆ.



ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ಭುಜಂಗನಗರದಲ್ಲಿ ಸಿದ್ದರಾಮಯ್ಯ-ನಾಗಮ್ಮ ದಂಪತಿಯ ಪುತ್ರರಾಗಿ ಜನಿಸಿದ ಶಿವರಾಚಯ್ಯ ಅವರು ಪ್ರಾಥಮಿಕ ಶಿಕ್ಷಣವನ್ನು ಸರ್ಕಾರಿ ಶಾಲೆಯಲ್ಲಿ, ಪ್ರೌಢ ಶಿಕ್ಷಣವನ್ನು ಛತ್ರಪತಿ ಶಿವಾಜಿ ವಿದ್ಯಾಮಂದಿರದಲ್ಲಿ ಹಾಗೂ ಡಿಪ್ಲೊಮಾ ಶಿಕ್ಷಣವನ್ನು ಬಳ್ಳಾರಿಯ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಪೂರ್ಣಗೊಳಿಸಿದರು.

1991ರ ಸೆಪ್ಟೆಂಬರ್ 11ರಂದು ಮಾದರ ಚೆನ್ನಯ್ಯ ಐಟಿಐ ಕಾಲೇಜಿನಲ್ಲಿ ವೃತ್ತಿಜೀವನ ಆರಂಭಿಸಿದ ಅವರು, ಹಿರಿಯ ತರಬೇತುದಾರರಾಗಿ ಸೇವೆ ಸಲ್ಲಿಸಿದರು. ಬಳಿಕ 1997ರ ಆಗಸ್ಟ್ 1ರಂದು ಡಂಬಳದ ಪ್ರತಿಷ್ಠಿತ ಜಗದ್ಗುರು ತೋಂಟ-ದಾರ್ಯ ಐಟಿಐ ಕಾಲೇಜಿನ ಪ್ರಾಚಾರ್ಯರಾಗಿ ಅಧಿಕಾರ ಸ್ವೀಕರಿಸಿ ಸಂಸ್ಥೆಯ ಬೆಳವಣಿಗೆಗೆ ಹೊಸ ಆಯಾಮ ನೀಡಿದರು.

ಅವರ ಆಡಳಿತಾವಧಿಯಲ್ಲಿ ಬೆಂಗಳೂರಿನ ಬಿಡದಿಯ ಪ್ರಸಿದ್ಧ ಟೋಯೊಟಾ ಮೋಟಾರು ಕಾರ್ಪೊರೇಷನ್

ಕಂಪನಿಯೊಂದಿಗೆ ತರಬೇತಿ ಮತ್ತು ಅಪ್ರೆಂಟಿಸ್‌ಶಿಪ್ ಸಂಬಂಧಿತ ಒಡಂಬಡಿಕೆ ಮಾಡಿಕೊಳ್ಳುವ ಅವಕಾಶ ಸಂಸ್ಥೆಗೆ ದೊರೆಯಿತು. ರಾಜ್ಯದ ಕೇವಲ ಐದು ಖಾಸಗಿ ಐಟಿಐ ಸಂಸ್ಥೆಗಳಲ್ಲಿ ಡಂಬಳ ಐಟಿಐ ಸ್ಥಾನ ಪಡೆದಿದ್ದು, ನೂರಾರು ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳ ಬಾಗಿಲು ತೆರೆದಿದೆ.

> "ಶಿಕ್ಷಣವೆಂದರೆ ಕೇವಲ ಜ್ಞಾನ ನೀಡುವುದಲ್ಲ, ಉತ್ತಮ ವ್ಯಕ್ತಿತ್ವವನ್ನು ರೂಪಿಸುವ ಮಹತ್ತರ ಕಾರ್ಯ. ಶಿವರಾಚಯ್ಯ ಅವರು ಶಿಸ್ತು, ಪ್ರಾಮಾಣಿಕತೆ ಹಾಗೂ ಕರ್ತವ್ಯನಿಷ್ಠೆಯಿಂದ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ್ದಾರೆ."
>
> **- ಡಾ. ತೋಂಟದ ಸಿದ್ದರಾಮ** ಮಹಾಸ್ವಾಮಿಗಳು

ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ದೃಷ್ಟಿಯಿಂದ ವಿವಿಧ ಕಂಪನಿಗಳನ್ನು ಕಾಲೇಜಿಗೆ ಆಹ್ವಾನಿಸಿ ಕ್ಯಾಂಪಸ್ ನೇಮಕಾತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ನೂರಾರು ವಿದ್ಯಾರ್ಥಿಗಳಿಗೆ ಉದ್ಯೋಗ ದೊರಕುವಂತೆ ಮಾಡಿದರು. ಅವರ ಮಾರ್ಗದರ್ಶನದಲ್ಲಿ ಶಿಕ್ಷಣ ಪಡೆದ ಅನೇಕ ವಿದ್ಯಾರ್ಥಿಗಳು ದೇಶ-ವಿದೇಶಗಳ ಪ್ರತಿಷ್ಠಿತ ಕಂಪನಿಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ಜೆ.ಟಿ.ಮಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಸಂಸ್ಥೆಯ ಅಭಿವೃದ್ಧಿ, ವಿದ್ಯಾರ್ಥಿಗಳ ಕೌಶಲ್ಯ ವೃದ್ಧಿ ಹಾಗೂ ಸಿಬ್ಬಂದಿಯೊಂದಿಗೆ ಉತ್ತಮ ಸಮನ್ವಯ ಸಾಧಿಸುವಲ್ಲಿ ಶಿವರಾಚಯ್ಯ ಅವರ ಕೊಡುಗೆ ಅಪಾರವಾಗಿದೆ ಎಂದು ಶ್ಲಾಘಿಸಿದರು.

> "ಐಟಿಐ ಶಿಕ್ಷಣವು ವಿದ್ಯಾರ್ಥಿಗಳ ಭವಿಷ್ಯದ ಭದ್ರ ಅಡಿಪಾಯ. ಶಿಸ್ತು, ಪ್ರಾಮಾಣಿಕತೆ ಮತ್ತು ಪರಿಶ್ರಮದಿಂದ ತಾಂತ್ರಿಕ ಕೌಶಲ್ಯಗಳನ್ನು ಅಳವಡಿಸಿಕೊಂಡರೆ ಯಶಸ್ಸು ಖಚಿತ."
>
> **-ಎಸ್.ಎಂ. ಶಿವರಾಚಯ್ಯ,** ನಿವೃತ್ತ ಪ್ರಾಚಾರ್ಯರು





## ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಜಿಲ್ಲೆಯ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ 20 ವಿಶೇಷ ಸಂಪನ್ಮೂಲ ಶಿಕ್ಷಕರ ಹುದ್ದೆಗಳನ್ನು ನೇರ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. 2026–27ನೇ ಸಾಲಿಗೆ ಪ್ರಾಥಮಿಕ ಹಾಗೂ ಪ್ರೌಢಶಾಲಾ ಹಂತದಲ್ಲಿ ಕಾರ್ಯನಿರ್ವಹಿಸಲು ವಿಶೇಷ ಶಿಕ್ಷಣದಲ್ಲಿ ಅಗತ್ಯ ವಿದ್ಯಾರ್ಹತೆ ಮತ್ತು ಆರ್‌ಸಿಐ ಪ್ರಮಾಣಪತ್ರ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಆಸಕ್ತ ಅಭ್ಯರ್ಥಿಗಳು ಜೂನ್ 15ರೊಳಗೆ ಅರ್ಜಿ ಸಲ್ಲಿಸಬೇಕಿದ್ದು, ಹೆಚ್ಚಿನ ಮಾಹಿತಿಗಾಗಿ 99643 62480 ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಸಮಗ್ರ ಶಿಕ್ಷಣ ಕರ್ನಾಟಕದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೈಟೆಕ್ ಕಳ್ಳಬಟ್ಟಿ ದಂಧೆ ಭೇದಿಸಿದ ಪೊಲೀಸರು

■ವಿಜಯಸಾಕ್ಷಿ ಸುದ್ದಿ, ಚಿಕ್ಕೋಡಿ

ರಾಯಬಾಗ ತಾಲೂಕಿನ ಮೊರಬ ಗ್ರಾಮದಲ್ಲಿ ನಡೆಯುತ್ತಿದ್ದ ಹೈಟೆಕ್ ಅಕ್ರಮ ಕಳ್ಳಬಟ್ಟಿ ದಂಧೆಯ ಜಾಲವನ್ನು ಕುಡಚಿ ಪೊಲೀಸರು ಭೇದಿಸಿದ್ದಾರೆ. ಖಚಿತ ಮಾಹಿತಿ ಮೇರೆಗೆ ದಿಢೀರ್ ದಾಳಿ ನಡೆಸಿದ ಪೊಲೀಸರು ಅಕ್ರಮ ಕಳ್ಳಬಟ್ಟಿ ಅಡ್ಡೆಯನ್ನು ಪತ್ತೆಹಚ್ಚಿ ಭಾರೀ ಪ್ರಮಾಣದ ಮದ್ಯ ತಯಾರಿಕಾ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ.

ದಾಳಿಯ ವೇಳೆ ಒಟ್ಟು 1,790 ಲೀಟರ್ ಬೆಲ್ಲದ ಕೊಳೆ (ಕಚ್ಚಾ ವಸ್ತು) ಹಾಗೂ 10 ಲೀಟರ್ ತಯಾರಾಗಿದ್ದ ಕಳ್ಳಬಟ್ಟಿ ಸಾರಾಯಿ ಸೇರಿದಂತೆ ಒಟ್ಟು 1,800 ಲೀಟರ್ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಘಟನೆಯಲ್ಲಿ ಒಬ್ಬ ಆರೋಪಿಯನ್ನು ಪೊಲೀಸರು ಬಂಧಿಸಿದ್ದು, ಇನ್ನಿಬ್ಬರು ಆರೋಪಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ತಿಳಿದು ಬಂದಿದೆ. ಈ ಸಂಬಂಧ ಕುಡಚಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತಲೆಮರೆಸಿಕೊಂಡಿರುವ ಆರೋಪಿಗಳ ಪತ್ತೆಗಾಗಿ ಶೋಧ ಕಾರ್ಯ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಜೂನ್ 21ರಂದು ಸಾವಿರಕ್ಕೂ ಅಧಿಕ ಯೋಗ ಸಾಧಕರಿಂದ ಸಾಮೂಹಿಕ ಯೋಗಾಭ್ಯಾಸ

# ಯೋಗದ ಅಲೆಗೆ ಧಾರವಾಡ ಸಜ್ಜು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಆರೋಗ್ಯಕರ ಸಮಾಜ ನಿರ್ಮಾಣದ ಸಂಕಲ್ಪದೊಂದಿಗೆ ಜೂನ್ 21ರಂದು ನಗರದ ಆರ್.ಎನ್. ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಭವ್ಯವಾಗಿ ನಡೆಯಲಿದ್ದು, ಸಾವಿರಕ್ಕೂ ಹೆಚ್ಚು ಯೋಗ ಸಾಧಕರು ಭಾಗವಹಿಸುವ ನಿರೀಕ್ಷೆಯಿದೆ. ಕಾರ್ಯಕ್ರಮದ ಯಶಸ್ವಿ ಆಯೋಜನೆಗಾಗಿ ಎಲ್ಲ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅಧಿಕಾರಿಗಳಿಗೆ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯೋಗವು ಕೇವಲ ಒಂದು ದಿನದ ಆಚರಣೆಯಲ್ಲ, ಅದು ಆರೋಗ್ಯಕರ ಬದುಕಿನ ದಾರಿದೀಪವಾಗಿದೆ ಎಂದು ಹೇಳಿದರು. ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಯೋಗ ಫೆಡರೇಷನ್, ಯೋಗ ಒಕ್ಕೂಟ, ವಿವಿಧ ಯೋಗ ತರಬೇತಿ ಸಂಸ್ಥೆಗಳು, ಎನ್‌ಸಿಸಿ, ಎನ್‌ಎಸ್‌ಎಸ್, ಸ್ಕೌಟ್ಸ್ ಮತ್ತು ಗೈಡ್ಸ್, ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದಾರೆ. ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ಆಯೋಜನೆಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ.

ಯೋಗ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರು, ಆಂಬುಲೆನ್ಸ್ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಬೇಕು. ಮಹಾನಗರ ಪಾಲಿಕೆ ಸ್ವಚ್ಛತೆ ಮತ್ತು ನೀರಿನ ವ್ಯವಸ್ಥೆಗೆ ವಿಶೇಷ ಗಮನ ನೀಡಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.


ಯೋಗ ತರಬೇತಿಯನ್ನು ಇನ್ನಷ್ಟು ಜನರಿಗೆ ತಲುಪಿಸುವ ಉದ್ದೇಶದಿಂದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಆನ್‌ಲೈನ್ ಮೂಲಕ ಯೋಗಾಭ್ಯಾಸ ಮಾಡಬಹುದಾಗಿದೆ. ಜೊತೆಗೆ ಜಿಲ್ಲೆಯ ಆಯುಷ್ ವೈದ್ಯಾಧಿಕಾರಿಗಳು ಮತ್ತು ಯೋಗ ತರಬೇತಿದಾರರ ಸಹಯೋಗದಲ್ಲಿ ಜೂನ್ 22ರಿಂದ 2027ರ ಜೂನ್ 21ರವರೆಗೆ ಒಂದು ವರ್ಷದ ಅವಧಿಗೆ ನಿತ್ಯ ಆನ್‌ಲೈನ್ ಯೋಗ ತರಗತಿಗಳನ್ನು ಆಯೋಜಿಸಲಾಗುತ್ತಿದೆ.

> “ಯೋಗವನ್ನು ಒಂದು ದಿನಕ್ಕೆ ಸೀಮಿತಗೊಳಿಸದೆ ಜೀವನದ ಭಾಗವಾಗಿಸಿಕೊಳ್ಳಬೇಕು. ಆರೋಗ್ಯ ರಕ್ಷಣೆಗೆ ಯೋಗ ಅತ್ಯುತ್ತಮ ಸಾಧನ.”
> – ಸ್ನೇಹಲ್ ಆರ್. ಜಿಲ್ಲಾಧಿಕಾರಿ

ಐಟಿ ಉದ್ಯೋಗಿಗಳು, ಯುವಜನತೆ ಹಾಗೂ ವೃತ್ತಿಪರರಿಗೆ ಯೋಗದ ಮಹತ್ವವನ್ನು ತಲುಪಿಸುವ ನಿಟ್ಟಿನಲ್ಲಿ ‘ವೈ–ಬ್ರೇಕ್’ ಆ್ಯಪ್‌ನ್ನು ಡೌನ್‌ಲೋಡ್ ಮಾಡಿಕೊಂಡು ಯೋಗಾಭ್ಯಾಸದಲ್ಲಿ ತೊಡಗಿಸಿಕೊಳ್ಳುವಂತೆ ಪ್ರೇರೇಪಿಸುವ ಕೆಲಸವನ್ನು ಆಯುಷ್ ಇಲಾಖೆ ಕೈಗೊಳ್ಳಲಿದೆ.

ಸಭೆಯಲ್ಲಿ ಡಿಸಿಪಿ ರವೀಶ್ ಸಿ.ಆರ್., ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಜಿಲ್ಲಾ ಆಯುಷ್ ಅಧಿಕಾರಿ ಡಾ. ಗಣೇಶ ಕಬಾಡೆ, ಶಿಕ್ಷಣ ಇಲಾಖೆ ಅಧಿಕಾರಿಗಳು, ಆಯುಷ್ ಕಾಲೇಜುಗಳ ಮುಖ್ಯಸ್ಥರು, ಕೆಎಂಎಫ್ ಅಧಿಕಾರಿಗಳು, ಪತಂಜಲಿ ಯೋಗ ಸಮಿತಿ, ಎನ್‌ಎಸ್‌ಎಸ್ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಗಳ ಪ್ರತಿನಿಧಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಎಚ್.ಕೆ. ಪಾಟೀಲರಿಗೆ ಸ್ಥಾನ ನೀಡದಿದ್ದರೆ ರಾಜೀನಾಮೆ ಎಚ್ಚರಿಕೆ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ರಾಜಕಾರಣದಲ್ಲಿ ಅಪಾರ ಅನುಭವ ಹೊಂದಿರುವ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಗದಗ ಶಾಸಕ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಎಸ್‌ಟಿ ಘಟಕದ ಜಿಲ್ಲಾಧ್ಯಕ್ಷ ಶಿವಪ್ಪ ಬಳ್ಳಾರಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಚ್.ಕೆ. ಪಾಟೀಲರು ಸಚಿವರಾಗಿದ್ದ ಅವಧಿಯಲ್ಲಿ ರೈತರ ಪರವಾಗಿ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಸಂಕಷ್ಟದ ಸಂದರ್ಭಗಳಲ್ಲಿ ಜನರ ಬೆನ್ನಿಗೆ ನಿಂತು ಕಾರ್ಯನಿರ್ವಹಿಸಿದ ನಾಯಕತ್ವ ಅವರದ್ದಾಗಿದೆ ಎಂದು ಹೇಳಿದರು.

ಗದಗ ಜಿಲ್ಲೆಗೆ ಗ್ರಾಮೀಣ ಪಂಚಾಯತ್ ವಿಶ್ವವಿದ್ಯಾಲಯ ಮಂಜೂರು ಮಾಡುವಲ್ಲಿ ಹಾಗೂ ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿಗೆ ವಿಶೇಷ ಕೊಡುಗೆ ನೀಡಿರುವುದನ್ನು ಸ್ಮರಿಸಿದ ಅವರು, ಗಡಿ ವಿವಾದದಂತಹ ಸೂಕ್ಷ್ಮ ವಿಷಯಗಳಲ್ಲೂ ಪಾಟೀಲರು ದೂರದೃಷ್ಟಿಯ ನಾಯಕತ್ವ ಪ್ರದರ್ಶಿಸಿದ್ದಾರೆ ಎಂದರು.

**ಸಚಿವ ಸ್ಥಾನ ನೀಡದಿದ್ದರೆ ರಾಜೀನಾಮೆ ಎಚ್ಚರಿಕೆ** : ವಾಲ್ಮೀಕಿ ಸಮಾಜದ ಮುಖಂಡ ಬಸವರಾಜ ಬೆಳದಡಿ ಮಾತನಾಡಿ, ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡದಿದ್ದರೆ ರಾಜ್ಯಾದ್ಯಂತ ಕಾಂಗ್ರೆಸ್ ಎಸ್‌ಟಿ ಘಟಕದ ಪದಾಧಿಕಾರಿಗಳು ಸಾಮೂಹಿಕ ರಾಜೀನಾಮೆ ನೀಡುವ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂದು ಎಚ್ಚರಿಸಿದರು.

> “ಎಚ್.ಕೆ. ಪಾಟೀಲರು ರೈತರು, ಬಡವರು ಹಾಗೂ ಜನಸಾಮಾನ್ಯರ ಪರವಾಗಿ ಹೋರಾಟ ನಡೆಸಿದ ನಾಯಕರು. ಅವರ ಸೇವೆ ಮತ್ತು ಸಾಧನೆಯನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು.”
> – ಶಿವಪ್ಪ ಬಳ್ಳಾರಿ, ಜಿಲ್ಲಾಧ್ಯಕ್ಷರು, ಕಾಂಗ್ರೆಸ್ ಎಸ್‌ಟಿ ಘಟಕ

ಪಕ್ಷ ಸಂಘಟನೆ ಹಾಗೂ ಆಡಳಿತಾತ್ಮಕ ಅನುಭವ ಹೊಂದಿರುವ ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡುವುದು ಗದಗ ಜಿಲ್ಲೆಯ ಜನರ ಬಹುದಿನಗಳ ಬೇಡಿಕೆಯಾಗಿದೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಹಾಲಪ್ಪ ಮಾಲ್ಯಪ್ಪನವರ, ಬಸವರಾಜ ದಾವಣಗೇರಿ, ಮಂಜುನಾಥ ಬೆಳದಡಿ, ಕೃಷ್ಣಪ್ಪ ದೇವರಮನಿ, ರಾಮು ಬಾಗಲಕೋಟಿ, ಮುತ್ತುರಾಜ ಬಳಗಾನೂರು, ಸಚಿನ್ ನಿಂಬಣ್ಣನವರ, ಕಿರಣ ನಾಯ್ಕರ, ದತ್ತು ಬೆಳದಡಿ, ನಾಗರಾಜ ಕುರುಗೋಡು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಗಡಿಪಾರು ಉಲ್ಲಂಘಿಸಿ ಮತ್ತೆ ದಾದಾಗಿರಿ; ರೌಡಿಶೀಟರ್‌ಗೆ ಗೂಂಡಾ ಅಸ್ತ್ರ!

■ವಿಜಯಸಾಕ್ಷಿ ಸುದ್ದಿ, ಗದಗ



ಹಲವು ವರ್ಷಗಳಿಂದ ಅಪರಾಧ ಚಟುವಟಿಕೆಗಳ ಮೂಲಕ ಪೊಲೀಸರಿಗೆ ತಲೆನೋವಾಗಿ ಪರಿಣಮಿಸಿದ್ದ ಕುಖ್ಯಾತ ರೌಡಿಶೀಟರ್‌ನೊಬ್ಬನ ವಿರುದ್ಧ ಕೊನೆಗೂ ಗೂಂಡಾ ಕಾಯ್ದೆಯ ಅಸ್ತ್ರ ಪ್ರಯೋಗಿಸಲಾಗಿದ್ದು, ಆರೋಪಿಯನ್ನು ಒಂದು ವರ್ಷದ ಅವಧಿಗೆ ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ರವಾನಿಸಲಾಗಿದೆ.

ಕೊಲೆ ಯತ್ನ, ಹಲ್ಲೆ, ಬೆದರಿಕೆ ಸೇರಿದಂತೆ ವಿವಿಧ ಗಂಭೀರ ಸ್ವರೂಪದ ಏಳು ಪ್ರಕರಣಗಳು ಭಾರತೀಯ ದಂಡ ಸಂಹಿತೆ (ಐಪಿಸಿ) ಹಾಗೂ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ (BNSS) ಅಡಿಯಲ್ಲಿ ದಾಖಲಾಗಿದ್ದರೆ, ಇನ್ನೂ ಎಂಟು ಪ್ರಕರಣಗಳಲ್ಲಿ ಕೂಡ ಆತ ಆರೋಪಿಯಾಗಿ ಗುರುತಿಸಿಕೊಂಡಿದ್ದಾನೆ. ಒಟ್ಟು 15 ಪ್ರಕರಣಗಳಲ್ಲಿ ಭಾಗಿಯಾಗಿರುವ ಲಕ್ಷ್ಮೇಶ್ವರದ ಇರ್ಫಾನ್ ವಿರುದ್ಧ ಹಲವು ಬಾರಿ ಕಾನೂನು ಕ್ರಮ ಕೈಗೊಂಡಿದ್ದರೂ, ಅಪರಾಧ ಚಟುವಟಿಕೆಗಳು ಮಾತ್ರ ನಿಂತಿರಲಿಲ್ಲ.

ಆರೋಪಿಯ ನಿರಂತರ ಸಮಾಜಘಾತುಕ ಚಟುವಟಿಕೆಗಳನ್ನು ಗಮನಿಸಿ ಈ ಹಿಂದೆ ಜಿಲ್ಲಾಡಳಿತ ಗಡಿಪಾರು ಆದೇಶ ಜಾರಿಗೊಳಿಸಿತ್ತು. ಆದರೆ, ಕಾನೂನಿನ ಆದೇಶಕ್ಕೂ ತಲೆಬಾಗದ ಆತ ಗಡಿಪಾರು ನಿಯಮಗಳನ್ನು ಉಲ್ಲಂಘಿಸಿ ಮತ್ತೆ ಜಿಲ್ಲೆಯಲ್ಲಿ ಕಾಣಿಸಿಕೊಂಡು ತನ್ನ ಚಟುವಟಿಕೆಗಳನ್ನು ಮುಂದುವರಿಸಿದ್ದಾನೆ ಎನ್ನಲಾಗಿದೆ.

ಈ ಹಿನ್ನೆಲೆಯಲ್ಲಿ ಆರೋಪಿಯ ವಿರುದ್ಧದ ಪ್ರಕರಣಗಳ ದಾಖಲು, ಅಪರಾಧ ಹಿನ್ನೆಲೆ ಹಾಗೂ ಸಾರ್ವಜನಿಕ ಶಾಂತಿಗೆ ಉಂಟಾಗಬಹುದಾದ ಅಪಾಯವನ್ನು ಪರಿಗಣಿಸಿದ ಪೊಲೀಸ್ ಇಲಾಖೆ, ಗೂಂಡಾ ಕಾಯ್ದೆಯಡಿ ಬಂಧನಕ್ಕೆ ಮುಂದಾಗಿದೆ. ಅಗತ್ಯ ಪ್ರಕ್ರಿಯೆ ಪೂರ್ಣಗೊಳಿಸಿದ ಬಳಿಕ ಆರೋಪಿಯನ್ನು ಒಂದು ವರ್ಷದ ಕಾಲ ಬಳ್ಳಾರಿ ಕೇಂದ್ರ ಕಾರಾಗೃಹದಲ್ಲಿ ಬಂಧನದಲ್ಲಿಡುವಂತೆ ಆದೇಶ ಜಾರಿಗೊಳಿಸಲಾಗಿದೆ.

“ಸಮಾಜಘಾತುಕ ಚಟುವಟಿಕೆಗಳಿಗೆ ಅವಕಾಶವಿಲ್ಲ”

ಜಿಲ್ಲೆಯಲ್ಲಿ ಸಾರ್ವಜನಿಕ ಶಾಂತಿ ಕದಡುವ, ಪುನರಾವರ್ತಿತ ಅಪರಾಧಗಳಲ್ಲಿ ತೊಡಗುವ ಹಾಗೂ ಕಾನೂನಿಗೆ ಸವಾಲು ಹಾಕುವ ವ್ಯಕ್ತಿಗಳ ವಿರುದ್ಧ ಕಠಿಣ ಕ್ರಮ ಮುಂದುವರಿಯಲಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ತಿಳಿಸಿದ್ದಾರೆ.

ಈ ಕ್ರಮದೊಂದಿಗೆ ಜಿಲ್ಲೆಯ ಅಪರಾಧಿಗಳಿಗೆ ಪೊಲೀಸ್ ಇಲಾಖೆ ಸ್ಪಷ್ಟ ಸಂದೇಶ ರವಾನಿಸಿದ್ದು, “ಕಾನೂನಿನ ಕೈಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ” ಎಂಬ ಎಚ್ಚರಿಕೆಯನ್ನು ನೀಡಿದೆ.

## ಆಹಾರ ಇಲಾಖೆ ಅಧಿಕಾರಿಗಳ ದಾಳಿ: ರೋಣದಲ್ಲಿ 34 ಕ್ವಿಂಟಲ್ ಪಿಡಿಎಸ್ ಅಕ್ಕಿ ಜಪ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಡವರ ಹೊಟ್ಟೆ ತುಂಬಿಸಬೇಕಿದ್ದ ಸರ್ಕಾರದ ಪಡಿತರ ಅಕ್ಕಿಯನ್ನು ಕಾಳಸಂತೆಗೆ ಸಾಗಿಸಲು ಯತ್ನಿಸಿದ ಜಾಲವನ್ನು ರೋಣ ಆಹಾರ ಇಲಾಖೆಯ ಅಧಿಕಾರಿಗಳು ಭೇದಿಸಿದ್ದು, 69 ಚೀಲ ಪಿಡಿಎಸ್ ಅಕ್ಕಿಯೊಂದಿಗೆ ಗೂಡ್ಸ್ ವಾಹನವನ್ನು ವಶಪಡಿಸಿಕೊಂಡಿದ್ದಾರೆ. ಅಕ್ರಮ ಸಾಗಣೆಯ ಹಿಂದೆ ದೊಡ್ಡ ಜಾಲವಿರುವ ಶಂಕೆ ವ್ಯಕ್ತವಾಗಿದ್ದು, ಪ್ರಕರಣದ ತನಿಖೆ ತೀವ್ರಗೊಳಿಸಲಾಗಿದೆ.



ಆಹಾರ ಇಲಾಖೆಗೆ ಬಂದ ಖಚಿತ ಮಾಹಿತಿಯ ಮೇರೆಗೆ ರೋಣ–ನರಗುಂದ ರಸ್ತೆಯ ಐಬಿ ಸಮೀಪ ಬುಧವಾರ ತಡರಾತ್ರಿ ಆಹಾರ ಇಲಾಖೆ ಅಧಿಕಾರಿಗಳು ಕಾರ್ಯಾಚರಣೆ ನಡೆಸಿದರು.

ಅನುಮಾನಾಸ್ಪದವಾಗಿ ಸಂಚರಿಸುತ್ತಿದ್ದ ಟಾಟಾ ಇಂಟ್ರಾ ವಾಹನವನ್ನು ತಡೆದು ಪರಿಶೀಲಿಸಿದಾಗ, ಸರ್ಕಾರದ ಸಾರ್ವಜನಿಕ ವಿತರಣಾ ವ್ಯವಸ್ಥೆಯ (ಪಿಡಿಎಸ್) ಅಕ್ಕಿಯನ್ನು ಅಕ್ರಮವಾಗಿ ಸಾಗಿಸಲಾಗುತ್ತಿರುವುದು ಬೆಳಕಿಗೆ ಬಂತು.

ತಪಾಸಣೆಯಲ್ಲಿ ವಾಹನದಲ್ಲಿ 69 ಚೀಲಗಳಲ್ಲಿ 34 ಕ್ವಿಂಟಲ್ 40 ಕೆ.ಜಿ. ಅಕ್ಕಿ ಪತ್ತೆಯಾಗಿದ್ದು, ಅಧಿಕಾರಿಗಳು ತಕ್ಷಣವೇ ಅಕ್ಕಿ ಹಾಗೂ ವಾಹನವನ್ನು ವಶಕ್ಕೆ ಪಡೆದರು. ವಶಪಡಿಸಿಕೊಂಡ ಅಕ್ಕಿಯ ಮೌಲ್ಯ ₹77,400 ಹಾಗೂ ವಾಹನದ ಮೌಲ್ಯ ₹2.50 ಲಕ್ಷ ಸೇರಿ ಒಟ್ಟು ₹3.27 ಲಕ್ಷ ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಲಾಗಿದೆ.

ಪ್ರಕರಣದಲ್ಲಿ ಗದಗ ನಗರದ ಗಣೇಶನಗರ ನಿವಾಸಿ ರಮಜಾನಸಾಬ್ ಹಸನಸಾಬ್ ಸೂರಣಗಿ (32) ಎಂಬಾತನನ್ನು ಆರೋಪಿಯಾಗಿ ಗುರುತಿಸಲಾಗಿದೆ. ಆತ ಚಾಲಕನಾಗಿ ಕಾರ್ಯ ನಿರ್ವಹಿಸುತ್ತಿದ್ದು, ಪಿಡಿಎಸ್ ಅಕ್ಕಿಯನ್ನು ಕಾಳಸಂತೆಗೆ ಸಾಗಿಸಲು ಯತ್ನಿಸಿದ್ದಾನೆ ಎಂದು ಆರೋಪಿಸಲಾಗಿದೆ.

ಆಹಾರ ನಿರೀಕ್ಷಕಿ ಸುವರ್ಣಾ ಜಮ್ಮನಕಟ್ಟಿ ನೀಡಿದ ದೂರಿನ ಮೇರೆಗೆ ರೋಣ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 107/2026 ದಾಖಲಾಗಿದ್ದು, ಅಗತ್ಯ ವಸ್ತುಗಳ ಕಾಯ್ದೆ ಹಾಗೂ ಪಿಡಿಎಸ್ ನಿಯಂತ್ರಣ ಆದೇಶದಡಿ ಪ್ರಕರಣ ದಾಖಲಿಸಿ ತನಿಖೆ ಮುಂದುವರಿಸಲಾಗಿದೆ.

### ಪರಿಸರ ಸಮತೋಲನ ಕಾಪಾಡಲು ಪ್ರತಿಯೊಬ್ಬರೂ ಸಸಿ ನೆಟ್ಟು ಪೋಷಿಸಬೇಕು: ಚಂದ್ರಶೇಖರ ಬಿ. ಕಂದಕೂರ

# ಒಂದು ಗಿಡ ನೆಡಿ: ಭವಿಷ್ಯ ಉಳಿಸಿ

■ವಿಜಯಸಾಕ್ಷಿ ಸುದ್ದಿ, ಹೊಳೆಆಲೂರು

ಹವಾಮಾನ ವೈಪರೀತ್ಯ, ತಾಪಮಾನ ಏರಿಕೆ ಹಾಗೂ ಪರಿಸರ ಮಾಲಿನ್ಯದಂತಹ ಸವಾಲುಗಳ ನಡುವೆ ಪರಿಸರ ಸಂರಕ್ಷಣೆಯ ಅಗತ್ಯತೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಪ್ರತಿಯೊಬ್ಬ ನಾಗರಿಕನು ತನ್ನ ಮನೆಯ ಸುತ್ತಮುತ್ತ ಕನಿಷ್ಠ ಒಂದು ಸಸಿಯನ್ನಾದರೂ ನೆಟ್ಟು ಅದರ ಪೋಷಣೆಯ ಜವಾಬ್ದಾರಿಯನ್ನು ವಹಿಸಿಕೊಳ್ಳಬೇಕು ಎಂದು ರೋಣ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಕರೆ ನೀಡಿದರು.



ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ರೋಣ ತಾಲೂಕಿನ ಕೌಶಲ್ಯ ಉದ್ಯಮಶೀಲತೆ ಜೀವನೋಪಾಯ ಸಂಜೀವಿನಿ ಮಹಿಳಾ ಸಂಘ, ಹೊಳೆಆಲೂರು ಗ್ರಾಮ ಪಂಚಾಯಿತಿ ಹಾಗೂ ಕಲ್ಲೇಶ್ವರ ಪ್ರೌಢಶಾಲೆಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಪರಿಸರ ಜಾಗೃತಿ ಮತ್ತು ಸಸಿ ನೆಡುವ ಕಾರ್ಯಕ್ರಮವನ್ನು ಸಸಿ ನೆಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಪರಿಸರ ಸಂರಕ್ಷಣೆ ಇಂದಿನ ಅತ್ಯಂತ ಪ್ರಮುಖ ಅಗತ್ಯವಾಗಿದ್ದು, ಪ್ರಕೃತಿಯೊಂದಿಗೆ ಮಾನವನ ಬದುಕು ಅವಿನಾಭಾವ ಸಂಬಂಧ ಹೊಂದಿದೆ. ಅರಣ್ಯ ನಾಶ, ಜಲಮೂಲಗಳ ಕ್ಷೀಣತೆ ಹಾಗೂ ಮಾಲಿನ್ಯದಿಂದ ಪರಿಸರ ಸಮತೋಲನಕ್ಕೆ ಧಕ್ಕೆಯಾಗುತ್ತಿದ್ದು, ಇದನ್ನು ತಡೆಯಲು ಪ್ರತಿಯೊಬ್ಬರೂ ಪರಿಸರ ಸ್ನೇಹಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ವಿಶೇಷವಾಗಿ ಶಾಲಾ ವಿದ್ಯಾರ್ಥಿಗಳಲ್ಲಿ ಪರಿಸರದ ಕುರಿತು ಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ಇಂದಿನ ಮಕ್ಕಳಲ್ಲಿ ಪರಿಸರ ಕಾಳಜಿ ಬೆಳೆಸಿದರೆ ನಾಳಿನ ಸಮಾಜ ಹಸಿರು ಮತ್ತು ಆರೋಗ್ಯಕರವಾಗಿರಲಿದೆ ಎಂದು ಅಭಿಪ್ರಾಯಪಟ್ಟರು.

> “ಪರಿಸರ ರಕ್ಷಣೆ ಸರ್ಕಾರದ ಕೆಲಸ ಮಾತ್ರವಲ್ಲ; ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯೂ ಹೌದು. ಪ್ರತಿಯೊಂದು ಮನೆಯಲ್ಲೂ ಕನಿಷ್ಠ ಒಂದು ಗಿಡ ಬೆಳೆದರೆ ಪರಿಸರ ಸಮತೋಲನ ಸಾಧ್ಯ.”
> – ಚಂದ್ರಶೇಖರ ಬಿ. ಕಂದಕೂರ

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳು, ಸ್ವಚ್ಛತಾ ಅಭಿಯಾನ, ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆ, ಜಲ ಸಂರಕ್ಷಣೆ, ಹಸಿರು ಗ್ರಾಮ ನಿರ್ಮಾಣ ಸೇರಿದಂತೆ ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಯೋಜನೆಗಳ ಕುರಿತು ಚರ್ಚೆ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಎನ್‌ಆರ್‌ಎಲ್‌ಎಂ ಸಿಬ್ಬಂದಿ, ಪಿಡಿಒ, ಗ್ರಾಮ ಪಂಚಾಯಿತಿ ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಕಲ್ಲೇಶ್ವರ ಪ್ರೌಢಶಾಲೆಯ ಮುಖ್ಯ ಶಿಕ್ಷಕರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

### ರಸಗೊಬ್ಬರ ವ್ಯಾಪಾರಿಗಳಿಗೆ ಕೃಷಿ ಇಲಾಖೆಯ ಖಡಕ್ ಆದೇಶ–ನಿಯಮ ಉಲ್ಲಂಘಿಸಿದರೆ ಪರವಾನಗಿ ರದ್ದು

# ಯೂರಿಯಾ–ಡಿಎಪಿ ಜೊತೆ ಬಲವಂತದ ಮಾರಾಟಕ್ಕೆ ಬ್ರೇಕ್!

■ವಿಜಯಸಾಕ್ಷಿ ಸುದ್ದಿ, ಗದಗ

ಯೂರಿಯಾ ಹಾಗೂ ಡಿಎಪಿ (DAP) ರಸಗೊಬ್ಬರಗಳ ಮಾರಾಟದ ವೇಳೆ ರೈತರಿಗೆ ಇತರೆ ಕೃಷಿ ಪರಿಕರಗಳು, ಜೈವಿಕ ಗೊಬ್ಬರಗಳು, ಲಘುಪೋಷಕಾಂಶಗಳು ಹಾಗೂ ಕೀಟನಾಶಕಗಳನ್ನು ಕಡ್ಡಾಯವಾಗಿ ಖರೀದಿಸುವಂತೆ ಒತ್ತಾಯಿಸುವ ‘ಲಿಂಕಿಂಗ್’ ಪದ್ಧತಿಯನ್ನು ತಕ್ಷಣವೇ ನಿಲ್ಲಿಸುವಂತೆ ಕೃಷಿ ಇಲಾಖೆ ಜಿಲ್ಲೆಯ ಎಲ್ಲಾ ರಸಗೊಬ್ಬರ ತಯಾರಕರು, ಸಗಟು ಹಾಗೂ ಚಿಲ್ಲರೆ ಮಾರಾಟಗಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.




ಸಹಾಯಧನದ ರಸಗೊಬ್ಬರಗಳನ್ನು ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಹಾಗೂ ಯೂರಿಯಾ–ಡಿಎಪಿ ವಿತರಣೆಯೊಂದಿಗೆ ಇತರೆ ಉತ್ಪನ್ನಗಳನ್ನು ಕಡ್ಡಾಯವಾಗಿ ಮಾರಾಟ ಮಾಡುತ್ತಿರುವ ಬಗ್ಗೆ ರೈತರು, ರೈತ ಸಂಘಟನೆಗಳು ಹಾಗೂ ಇಲಾಖೆಯ ತಪಾಸಣಾ ತಂಡಗಳಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ ಜಂಟಿ ಕೃಷಿ ನಿರ್ದೇಶಕರು ಈ ಆದೇಶ ಹೊರಡಿಸಿದ್ದಾರೆ.

ರೈತರು ತಮ್ಮ ಭೂಮಿ ಮತ್ತು ಬೆಳೆ ಅಗತ್ಯಕ್ಕೆ ಅನುಗುಣವಾಗಿ ಬೇಕಾದ ರಸಗೊಬ್ಬರವನ್ನು ಮಾತ್ರ ಖರೀದಿಸಲು ಸಂಪೂರ್ಣ ಸ್ವಾತಂತ್ರ್ಯ ಹೊಂದಿದ್ದು, ಯಾವುದೇ ವ್ಯಾಪಾರಿ ಹೆಚ್ಚುವರಿ ಉತ್ಪನ್ನ ಖರೀದಿಸಲು ಒತ್ತಾಯಿಸುವಂತಿಲ್ಲ ಎಂದು ಸ್ಪಷ್ಟಪಡಿಸಲಾಗಿದೆ.

> “ರೈತರು ಯೂರಿಯಾ ಅಥವಾ ಡಿಎಪಿ ಖರೀದಿಸಲು ಬಂದಾಗ ಇತರೆ ಗೊಬ್ಬರ, ಕೀಟನಾಶಕ ಅಥವಾ ಕೃಷಿ ಪರಿಕರಗಳನ್ನು ಕಡ್ಡಾಯವಾಗಿ ಖರೀದಿಸುವಂತೆ ಒತ್ತಾಯಿಸುವುದು ಕಾನೂನುಬಾಹಿರ. ಇಂತಹ ಕ್ರಮಗಳಿಗೆ ಅವಕಾಶವಿಲ್ಲ.”
> – ಜಂಟಿ ಕೃಷಿ ನಿರ್ದೇಶಕರು, ಗದಗ

ಪ್ರತಿ ಚೀಲ ರಸಗೊಬ್ಬರ ಮಾರಾಟವನ್ನು ಕಡ್ಡಾಯವಾಗಿ ಪಾಯಿಂಟ್ ಆಫ್ ಸೇಲ್ (PoS) ಯಂತ್ರದ ಮೂಲಕವೇ ಮಾಡಬೇಕು. ಅನಧಿಕೃತ ಮಾರಾಟ, ಕೃತಕ ಅಭಾವ ಸೃಷ್ಟಿಸುವುದು ಹಾಗೂ ಕಾಳಸಂತೆಯಲ್ಲಿ ಮಾರಾಟ ಮಾಡುವುದಕ್ಕೆ ಅವಕಾಶವಿಲ್ಲ ಎಂದು ಇಲಾಖೆ ಎಚ್ಚರಿಸಿದೆ.

ಪ್ರತಿ ಮಾರಾಟ ಮಳಿಗೆಯ ಮುಂಭಾಗದಲ್ಲಿ ದೈನಂದಿನ ದಾಸ್ತಾನು ಹಾಗೂ ಗರಿಷ್ಠ ಮಾರಾಟ ಬೆಲೆ (MRP) ವಿವರಗಳನ್ನು ಸ್ಪಷ್ಟವಾಗಿ ಪ್ರದರ್ಶಿಸಬೇಕು. ರೈತರಿಗೆ ಖರೀದಿಯ ನಂತರ ಅಧಿಕೃತ ಬಿಲ್ ಅಥವಾ ರಸೀದಿ ನೀಡುವುದು ಕಡ್ಡಾಯವಾಗಿದೆ.

ರೈತರ ಹಿತಾಸಕ್ತಿಗೆ ಧಕ್ಕೆಯಾಗದಂತೆ ರಸಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆ ಕಾಪಾಡುವಂತೆ ಜಂಟಿ ಕೃಷಿ ನಿರ್ದೇಶಕರು ಜಿಲ್ಲೆಯ ಎಲ್ಲಾ ಮಾರಾಟಗಾರರಿಗೆ ಮತ್ತೊಮ್ಮೆ ಸೂಚನೆ ನೀಡಿದ್ದಾರೆ.

**ಹಠಾತ್ ತಪಾಸಣೆ–ಪರವಾನಗಿ ರದ್ದಿನ ಎಚ್ಚರಿಕೆ**

ಜಿಲ್ಲೆಯಾದ್ಯಂತ ಸಹಾಯಕ ಕೃಷಿ ನಿರ್ದೇಶಕರು, ಜಾಗೃತದಳ ಹಾಗೂ ರಸಗೊಬ್ಬರ ಪರಿವೀಕ್ಷಕರು ಹಠಾತ್ ತಪಾಸಣೆ ನಡೆಸಲಿದ್ದು, ನಿಯಮ ಉಲ್ಲಂಘನೆ, ಕೃತಕ ಅಭಾವ ಸೃಷ್ಟಿ ಅಥವಾ ಲಿಂಕಿಂಗ್ ಪದ್ಧತಿ ಕಂಡುಬಂದರೆ ಸಂಬಂಧಿಸಿದ ಮಾರಾಟಗಾರರ ಪರವಾನಗಿಯನ್ನು ತಕ್ಷಣ ಅಮಾನತು ಅಥವಾ ರದ್ದುಪಡಿಸಲಾಗುವುದು ಎಂದು ಕೃಷಿ ಇಲಾಖೆ ಎಚ್ಚರಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka